ಸಂಪುಟ: 11 ಸಂಚಿಕೆ: 203 ಪುಟಗಳು: 4+2 ಬೆಲೆ: ₹ 3.00 ಗುರುವಾರ, ಸೆಪ್ಟೆಂಬರ್ 17, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 203 Pages : 4+2 Rate : 3.00 Thursday, September 17, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22

## ನಿವೇಶನ ಮಂಜೂರಿಗೆ ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಪುರಸಭೆ ವ್ಯಾಪ್ತಿಯ ವಾರ್ಡ್ ನಂ.17ರ ಸರ್ವೆ ನಂ.91ರ ಪ್ಲಾಟ್ ನಂ.02ರಲ್ಲಿರುವ ಖುಲ್ಲಾ ಜಾಗವನ್ನು ಅರಳು ಗ್ರಾಮೀಣ ಮತ್ತು ನಗರಾಭಿವೃದ್ಧಿ ಸಂಸ್ಥೆ (ರಿ.)ಗೆ ವಿಶೇಷ ಬುದ್ಧಿಮಾಂದ್ಯ ಮಕ್ಕಳ ಶಾಲಾ ಕಟ್ಟಡ ನಿರ್ಮಾಣಕ್ಕಾಗಿ ನಿವೇಶನವಾಗಿ ಮಂಜೂರು ಮಾಡಲು ಲಕ್ಷ್ಮೇಶ್ವರ ಪುರಸಭೆ ಮುಂದಾಗಿದೆ.

ಒಟ್ಟು 1,392.96 ಚದರ ಮೀಟರ್ (ಸುಮಾರು 14,994 ಚದರ ಅಡಿ) ವಿಸ್ತೀರ್ಣದ ಈ ನಿವೇಶನ ಮಂಜೂರಿಗೆ ಸಂಬಂಧಿಸಿದಂತೆ ಸೆ.2ರಂದು ಪುರಸಭೆಯ ಆಡಳಿತಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ವಿಷಯ ನಂ.01, ಠರಾವು ನಂ.476ರಂತೆ ನಿರ್ಣಯ ಕೈಗೊಳ್ಳಲಾಗಿದೆ.

ನಿವೇಶನ ಮಂಜೂರಿಗೆ ಸಂಬಂಧಿಸಿದಂತೆ ಸಾರ್ವಜನಿಕರು ಅಥವಾ ಸಂಬಂಧಪಟ್ಟ ವ್ಯಕ್ತಿಗಳಿಗೆ ಯಾವುದೇ ಆಕ್ಷೇಪಣೆ, ತಕರಾರು ಇದ್ದಲ್ಲಿ, ಈ ಪ್ರಕಟಣೆ ಪ್ರಕಟವಾದ ದಿನದಿಂದ 30 ದಿನಗಳೊಳಗಾಗಿ ಸೂಕ್ತ ದಾಖಲೆ ಹಾಗೂ ಪುರಾವೆಗಳೊಂದಿಗೆ ಲಕ್ಷ್ಮೇಶ್ವರ ಪುರಸಭೆ ಕಚೇರಿಗೆ ಲಿಖಿತವಾಗಿ ಸಲ್ಲಿಸಬೇಕು ಎಂದು ಸೂಚಿಸಲಾಗಿದೆ.

ನಿಗದಿತ ಅವಧಿ ಪೂರ್ಣಗೊಂಡ ಬಳಿಕ ಸಲ್ಲಿಕೆಯಾಗುವ ಯಾವುದೇ ಆಕ್ಷೇಪಣೆ ಅಥವಾ ದೂರುಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಪುರಸಭೆ ಸ್ಪಷ್ಟಪಡಿಸಿದೆ.

ಹೆಚ್ಚಿನ ಮಾಹಿತಿಗಾಗಿ ಪುರಸಭೆ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಹಾಯಧನಕ್ಕೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ವೀರಶೈವ-ಲಿಂಗಾಯತ ಜಾತಿ ಹಾಗೂ ಉಪಜಾತಿಗೆ ಸೇರಿದ ಪ್ರವರ್ಗ-IIIಬಿ ಸಮುದಾಯದ ಜನರ ಆರ್ಥಿಕ ಹಾಗೂ ಶೈಕ್ಷಣಿಕ ಅಭಿವೃದ್ಧಿಗಾಗಿ 2026-27ನೇ ಸಾಲಿನಲ್ಲಿ ವಿವಿಧ ಸಾಲ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಗಳಡಿ ಸಾಲ ಸೌಲಭ್ಯ ಪಡೆಯಲು ಅರ್ಹ ಫಲಾನುಭವಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಬಸವ ಬೆಳಗು, ವಿದೇಶ ವಿದ್ಯಾ ವಿಕಾಸ, ಜೀವಜಲ, ಕಾಯಕ ಕಿರಣ, ಸ್ವಾವಲಂಬಿ ಸಾರಥಿ ಹಾಗೂ ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆಗಳಡಿ ಸಾಲ ಸೌಲಭ್ಯ ಪಡೆಯಲು ಅರ್ಹರು ಅರ್ಜಿ ಸಲ್ಲಿಸಬಹುದಾಗಿದೆ. ಸೆಪ್ಟಂಬರ್ 30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದ್ದು, ಅರ್ಹ ಫಲಾನುಭವಿಗಳು ನಿಗದಿತ ಅವಧಿಯೊಳಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಂತೆ ಕರ್ನಾಟಕ ವೀರಶೈವ-ಲಿಂಗಾಯತ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಗದಗದ ಹುಬ್ಬಳ್ಳಿ ರಸ್ತೆಯಲ್ಲಿರುವ ಜಿಲ್ಲಾ ಆಡಳಿತ ಭವನದ 2ನೇ ಮಹಡಿಯ ಕೊಠಡಿ ಸಂಖ್ಯೆ 202ರಲ್ಲಿರುವ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ಕಚೇರಿಯನ್ನು ಸಂಪರ್ಕಿಸಬಹುದು.

## ಆರೋಗ್ಯ ಕಾಪಾಡಲು ಯೋಗವೇ ದಾರಿ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಆಧುನಿಕ ಜೀವನಶೈಲಿಯಲ್ಲಿ ಆರೋಗ್ಯ ಕಾಪಾಡಿಕೊಳ್ಳಲು ಯೋಗ ಪ್ರಮುಖ ಪಾತ್ರ ವಹಿಸುತ್ತದೆ. ವಿದ್ಯಾರ್ಥಿಗಳು ಯೋಗದ ಮಹತ್ವ ಅರಿತು, ಅದನ್ನು ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಬಸವರಾಜ ಎಂ. ಯರಗುಪ್ಪಿ ಹೇಳಿದರು. ಅವರು ಬುಧವಾರ ಅಡರಕಟ್ಟಿ ಗ್ರಾಮದ ಪಿಎಂ ಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿರಹಟ್ಟಿ ಕ್ಷೇತ್ರ ಶಿಕ್ಷಣಾಧಿಕಾರಿ ಶಿವರಾಜ ಸಿಮಿಕೇರಿ ಹಾಗೂ ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಎಲ್.ಟಿ. ಪಾಟೀಲ ಅವರ ಮಾರ್ಗದರ್ಶನದಲ್ಲಿ ಆಯೋಜಿಸಿದ್ದ 2026-27ನೇ ಸಾಲಿನ 14 ಮತ್ತು 17ರ ವಯೋಮಾನದ ಬಾಲಕ ಹಾಗೂ ಬಾಲಕಿಯರ ತಾಲೂಕು ಮಟ್ಟದ ಯೋಗಾಸನ ಸ್ಪರ್ಧೆ ಉದ್ಘಾಟಿಸಿ ಮಾತನಾಡಿದರು. 'ಯೋಗಾಸನ ಮಾಡುವವರಿಗೆ ರೋಗ ದೂರವಾಗುತ್ತದೆ' ಎಂಬ ಮಾತಿನಂತೆ, ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ಧಿಗೆ ಯೋಗ ಸಹಕಾರಿಯಾಗಿದೆ. ವಿದ್ಯಾರ್ಥಿಗಳು ಚಿಕ್ಕ ವಯಸ್ಸಿನಿಂದಲೇ ಯೋಗಾಭ್ಯಾಸವನ್ನು ರೂಢಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಮಲ್ಲೇಶಪ್ಪ ಅಡರಕಟ್ಟಿ ಅಧ್ಯಕ್ಷತೆ ವಹಿಸಿದ್ದರು. ಪ್ರಧಾನ ಗುರುಮಾತೆ ಎಂ.ವೈ. ನೀಲನಾಯ್ಕರ, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಸಂಘಟನಾ ಕಾರ್ಯದರ್ಶಿ ಎಸ್.ಸಿ. ಹಿರೇಮಠ, ಎ.ಎಂ. ಮಠದ, ಮಂಜುನಾಥ ಚಾಕಲಬ್ಬಿ, ಪಿ.ಸಿ. ಕಾಳಶೆಟ್ಟಿ, ಡಿ.ಡಿ. ಲಮಾಣಿ, ಡಿ.ಕೆ. ಕೋಟೆಗೌಡ್ರ, ಜಿ.ಎನ್. ಹೆಬ್ಬಳ್ಳಿ, ಎಲ್.ಟಿ. ಪೂಜಾರ, ಕೆ.ವೈ. ಮುದಗಲ್, ರೂಪಾ ಸಂತಿ, ವೀಣಾ ಹತ್ತಿಕಾಳ, ಕೆ.ಎಂ. ಕೊಟ್ರಮ್ಮ, ಎಸ್.ಎಂ. ಕೌಜಗೇರಿ, ಪಿ.ಬಿ. ಗುರಮಠ ಸೇರಿದಂತೆ ವಿವಿಧ ಶಾಲೆಗಳ ಯೋಗಾಸನ ಸ್ಪರ್ಧಿಗಳು ಪಾಲ್ಗೊಂಡಿದ್ದರು.

### ಆತ್ಮಹತ್ಯೆ ತಡೆಗೆ ಅರಿವು ಮೂಡಿಸುವುದು ಎಲ್ಲರ ಜವಾಬ್ದಾರಿ: ಸಿ.ಎಸ್. ಶಿವನಗೌಡ್ರ

# ವಿದ್ಯಾರ್ಥಿಗಳಲ್ಲಿ ಆತ್ಮಹತ್ಯೆ ಹೆಚ್ಚಳ ಕಳವಳಕಾರಿ

**ವಿಜಯಸಾಕ್ಷಿ ಸುದ್ದಿ, ಗದಗ**

ಇತ್ತೀಚಿನ ದಿನಗಳಲ್ಲಿ ಆತ್ಮಹತ್ಯೆ ಪ್ರಕರಣಗಳು ಹೆಚ್ಚಾಗುತ್ತಿದ್ದು, ಅದರಲ್ಲೂ ವಿದ್ಯಾರ್ಥಿಗಳಲ್ಲಿ ಆತ್ಮಹತ್ಯೆ ಪ್ರಕರಣಗಳು ಕಂಡುಬರುತ್ತಿರುವುದು ಕಳವಳಕಾರಿ ಎಂದು ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಹೇಳಿದರು.

ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ, ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಹಾಗೂ ಡಿ.ಜಿ.ಎಂ. ಆಯುರ್ವೇದಿಕ ವೈದ್ಯಕೀಯ ಮಹಾವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ ಬುಧವಾರ ಡಿ.ಜಿ.ಎಂ. ಆಯುರ್ವೇದಿಕ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಸಮಾಜದಲ್ಲಿ ಆಗುತ್ತಿರುವ ಬದಲಾವಣೆಗಳು ಆತ್ಮಹತ್ಯೆಗೆ ಕಾರಣವಾಗುತ್ತಿವೆ. ಮಾನವ ಸಂಘಜೀವನದಿಂದ ದೂರ ಸರಿದು ಏಕಾಂಗಿತನದತ್ತ ಸಾಗುತ್ತಿರುವುದು ಪ್ರಮುಖ ಕಾರಣಗಳಲ್ಲಿ ಒಂದಾಗಿದೆ. ಇಂತಹ ಸಂದರ್ಭದಲ್ಲಿ ಕುಟುಂಬ ಹಾಗೂ ಸಮಾಜದ ಬೆಂಬಲ ಅತ್ಯಂತ ಅಗತ್ಯ. ಆತ್ಮಹತ್ಯೆಯ ಆಲೋಚನೆಗಳು ಬಂದಾಗ ಟೆಲಿ ಮಾನಸ್ ಉಚಿತ ಸಹಾಯವಾಣಿ 14416ಕ್ಕೆ ಕರೆ ಮಾಡಿ ನೆರವು ಪಡೆಯಬೇಕು ಎಂದು ಶಿವನಗೌಡ್ರ ಸಲಹೆ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ಕೌಟುಂಬಿಕ ಸಮಸ್ಯೆ, ಪ್ರೀತಿ ಪ್ರೇಮಕ್ಕೆ ಸಂಬಂಧಿಸಿದ ಸಮಸ್ಯೆಗಳು ಹಾಗೂ ಸಮಸ್ಯೆಗಳನ್ನು ನಿಭಾಯಿಸಲು ಅಗತ್ಯವಾದ ಜೀವನ ಕೌಶಲ್ಯದ ಕೊರತೆ ಸೇರಿದಂತೆ ಹಲವು ಕಾರಣಗಳಿಂದ ಆತ್ಮಹತ್ಯೆ ಪ್ರಕರಣಗಳು ಸಂಭವಿಸುತ್ತಿವೆ ಎಂದರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಅನುಷ್ಠಾನಾಧಿಕಾರಿ ಡಾ. ಜಿ.ಎಸ್. ಪಲ್ಲೇದ ಪ್ರಾಸ್ತಾವಿಕವಾಗಿ ಮಾತನಾಡಿ, 2003ರಿಂದ ಸೆಪ್ಟೆಂಬರ್ 10ರಂದು ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ ಆಚರಿಸಲಾಗುತ್ತಿದ್ದು, ಆತ್ಮಹತ್ಯೆ ತಡೆ ಕುರಿತು ಜಾಗೃತಿ ಮೂಡಿಸುವುದು ಇದರ ಉದ್ದೇಶವಾಗಿದೆ ಎಂದರು.

ಮನೋವೈದ್ಯ ಡಾ. ಶ್ಯಾಮಸುಂದರ ಬಾಲೇಹೊಸೂರ ಆತ್ಮಹತ್ಯೆಯ ಕಾರಣಗಳು ಹಾಗೂ ತಡೆಗಟ್ಟುವ ಕ್ರಮಗಳ ಕುರಿತು ಉಪನ್ಯಾಸ ನೀಡಿದರು. ಡಿ.ಜಿ.ಎಂ. ಆಯುರ್ವೇದಿಕ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಎಸ್.ಎಂ. ಬೆಳವಡಿ ಅಧ್ಯಕ್ಷತೆ ವಹಿಸಿದ್ದರು.

> ಜೀವನ ಅತ್ಯಮೂಲ್ಯವಾದುದು. ಆತ್ಮಹತ್ಯೆ ತಡೆಗಟ್ಟುವಲ್ಲಿ ಯಾರೇ ಪ್ರಯತ್ನಿಸಿ ಯಶಸ್ವಿಯಾದರೂ ಅವರು ದೇವರ ಕೆಲಸ ಮಾಡಿದಂತೆಯೇ. ಆತ್ಮಹತ್ಯೆಯ ಆಲೋಚನೆಗಳು ಬಂದಾಗ ಚಿಕಿತ್ಸೆ ಹಾಗೂ ಆಪ್ತ ಸಮಾಲೋಚನೆಯ ಸೇವೆ ಪಡೆಯಬೇಕು. ಹದಿಹರೆಯದ ಮಕ್ಕಳ ಬಗ್ಗೆ ಹೆಚ್ಚು ಗಮನ ನೀಡುವುದು ಅಗತ್ಯ. ಆತ್ಮಹತ್ಯೆ ತಡೆಗಟ್ಟುವ ಕುರಿತು ಅರಿವು ಮೂಡಿಸುವುದು ಎಲ್ಲರ ಜವಾಬ್ದಾರಿ.
>
> – ಸಿ.ಎಸ್. ಶಿವನಗೌಡ್ರ, ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ

ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆ ಹಾಗೂ ವೈದ್ಯಕೀಯ ಮಹಾವಿದ್ಯಾಲಯದ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ ಚವ್ಹಾಣ ಪ್ರತಿಜ್ಞಾ ವಿಧಿ ಬೋಧಿಸಿದರು. ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ. ಬೆನ್ನೂರ ನಿರೂಪಿಸಿದರು. ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಎಫ್. ಹನಕನಹಳ್ಳಿ ವಂದಿಸಿದರು.

### ಎಲ್ಲ ಜನಪ್ರತಿನಿಧಿಗಳ ಸಹಕಾರದೊಂದಿಗೆ ಅಭಿವೃದ್ಧಿ: ಎಚ್.ಕೆ. ಪಾಟೀಲ

## ವರವಿ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಒತ್ತು

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಹಾಗೂ ಹೊರರಾಜ್ಯಗಳಿಂದ ಭಕ್ತರು ಆಗಮಿಸುವ ಶ್ರೀಕ್ಷೇತ್ರ ವರವಿಯ ಸಮಗ್ರ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಈ ಭಾಗದ ಎಲ್ಲ ಜನಪ್ರತಿನಿಧಿಗಳ ಸಹಕಾರದೊಂದಿಗೆ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ಮಾಜಿ ಸಚಿವ ಹಾಗೂ ಶಾಸಕ ಎಚ್.ಕೆ. ಪಾಟೀಲ ಹೇಳಿದರು.

ಶ್ರೀಕ್ಷೇತ್ರ ವರವಿಯಲ್ಲಿ ನಡೆದ ಮೌನೇಶ್ವರರ ಜಾತ್ರಾಮಹೋತ್ಸವದ ಸಮಾರೋಪ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಮೌನೇಶ್ವರರ ದರ್ಶನಕ್ಕೆ ವಿವಿಧೆಡೆಯಿಂದ ಭಕ್ತರು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಅವರಿಗೆ ಅನುಕೂಲವಾಗುವಂತೆ ಮೂಲಸೌಲಭ್ಯ ಕಲ್ಪಿಸುವ ಅಗತ್ಯವಿದೆ. ಈ ನಿಟ್ಟಿನಲ್ಲಿ 25 ಕೊಠಡಿಗಳ ಸುಸಜ್ಜಿತ ಅತಿಥಿಗೃಹ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುತ್ತಿದ್ದು, ಗಣೇಶ ಹಾಗೂ ವಿಠೋಭ ಮಂದಿರಗಳ ನಿರ್ಮಾಣಕ್ಕೂ ಶಿಲಾನ್ಯಾಸ ನೆರವೇರಿಸಲಾಗಿದೆ. ಮೌನೇಶ್ವರ ಸಮುದಾಯ ಭವನ ಹಾಗೂ ದೇವಸ್ಥಾನದ ಸಮಗ್ರ ಅಭಿವೃದ್ಧಿಗೆ ಅಗತ್ಯವಿರುವ ಅನುದಾನವನ್ನು ಸರ್ಕಾರದಿಂದ ಬಿಡುಗಡೆಗೊಳಿಸಲು ಶ್ರಮಿಸುವುದಾಗಿ ಎಚ್.ಕೆ. ಪಾಟೀಲ ಭರವಸೆ ನೀಡಿದರು.



ವಿಶ್ವಕರ್ಮ ಮಹಾ ಒಕ್ಕೂಟದ ರಾಜ್ಯ ಅಧ್ಯಕ್ಷ ವಿಜಯಕುಮಾರ ಪತ್ತಾರ ಮಾತನಾಡಿ, ಸಮುದಾಯ ಭವನದ ಬಾಕಿ ಕಾಮಗಾರಿಗಳಿಗಾಗಿ ಈಗಾಗಲೇ ಒಂದು ಕೋಟಿ ರೂ. ಅನುದಾನ ಬಿಡುಗಡೆಯಾಗಿದೆ. ಸಚಿವರು ಹಾಗೂ ಶಾಸಕರ ಸಹಕಾರದೊಂದಿಗೆ ಇನ್ನಷ್ಟು ಅನುದಾನ ಪಡೆದು, ಟ್ರಸ್ಟ್ ಮತ್ತು ಸಮಾಜದ ಸಹಭಾಗಿತ್ವದಲ್ಲಿ ವರವಿ ಕ್ಷೇತ್ರವನ್ನು ಅಭಿವೃದ್ಧಿಪಡಿಸಲಾಗುವುದು ಎಂದರು.


ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀಕ್ಷೇತ್ರ ವರವಿ ಮೌನೇಶ್ವರ ದೇವಸ್ಥಾನ ಹಾಗೂ ಮಠದ ವಿಕಾಸ ಟ್ರಸ್ಟ್ ಅಧ್ಯಕ್ಷ ಮೋಹನ ಸಿ. ನರಗುಂದ ವಹಿಸಿದ್ದರು. ಶಹಾಪುರ ಶ್ರೀ ಕಾಳಹಸ್ತೇಂದ್ರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಮಾಜಿ ಶಾಸಕ ರಾಮಣ್ಣ ಲಮಾಣಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ವಾಸಣ್ಣ ಕುರಡಗಿ, ಮುಖಂಡರಾದ ವಿಶ್ವನಾಥ ಕಪ್ಪತ್ತನವರ, ಹುಮಾಯೂನ ಮಾಗಡಿ, ಡಿ.ಕೆ. ಹೊನ್ನಪ್ಪನವರ, ರಾಜಗೋಪಾಲ ಕಡ್ಲಿಕೊಪ್ಪ, ತಿಪ್ಪಣ್ಣ ಕೊಂಚಿಗೇರಿ, ವೀರಯ್ಯ ಮಠಪತಿ, ದೇವಪ್ಪ ಲಮಾಣಿ, ಅಜ್ಜನಗೌಡ ಪಾಟೀಲ, ಮುತ್ತಣ್ಣ ಕಪ್ಪತ್ತನವರ, ಅಶೋಕ ಮಂದಾಲಿ, ನಾಗರಾಜ ಕಮ್ಮಾರ ಸೇರಿದಂತೆ ಟ್ರಸ್ಟ್‌ನ ಸರ್ವ ಸದಸ್ಯರು ಉಪಸ್ಥಿತರಿದ್ದರು. ವಿಶ್ವನಾಥ ಕಮ್ಮಾರ ಕಾರ್ಯಕ್ರಮ ನಿರೂಪಿಸಿದರು.

> ಶ್ರೀಕ್ಷೇತ್ರ ವರವಿಯ ಸಮಗ್ರ ಅಭಿವೃದ್ಧಿಯನ್ನು ಈ ಭಾಗದ ಎಲ್ಲ ಜನಪ್ರತಿನಿಧಿಗಳ ಸಹಕಾರದೊಂದಿಗೆ ಕೈಗೊಳ್ಳಲಾಗುವುದು. ಭಕ್ತರಿಗೆ ಅಗತ್ಯ ಮೂಲಸೌಲಭ್ಯ ಕಲ್ಪಿಸುವುದರ ಜತೆಗೆ ಕ್ಷೇತ್ರದ ಅಭಿವೃದ್ಧಿಗೆ ಬೇಕಾದ ಅನುದಾನವನ್ನು ಸರ್ಕಾರದಿಂದ ಬಿಡುಗಡೆಗೊಳಿಸಲು ಶ್ರಮಿಸುತ್ತೇನೆ.
>
> – ಎಚ್.ಕೆ. ಪಾಟೀಲ, ಮಾಜಿ ಸಚಿವ

## ಯುಪಿಐ ಶುಲ್ಕ ಹಿಂಪಡೆಯಲು ಸಂಗನಗೌಡ ಪಾಟೀಲ ಆಗ್ರಹ

**ವಿಜಯಸಾಕ್ಷಿ ಸುದ್ದಿ, ಡಂಬಳ**



₹2,000ಕ್ಕಿಂತ ಹೆಚ್ಚಿನ ನಿರ್ದಿಷ್ಟ ವ್ಯಾಪಾರಿ ಯುಪಿಐ ವಹಿವಾಟುಗಳಿಗೆ ಅಕ್ಟೋಬರ್ 15ರಿಂದ ಜಾರಿಗೆ ಬರಲಿರುವ ಮರ್ಚೆಂಟ್‌ಡಿಸ್ಕೌಂಟ್ ರೇಟ್ ವ್ಯವಸ್ಥೆಯನ್ನು ಕೇಂದ್ರ ಸರ್ಕಾರ ಹಿಂಪಡೆಯಬೇಕು ಎಂದು ರೋಣ ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ (ಮಿಥುನ) ಜಿ. ಪಾಟೀಲ ಆಗ್ರಹಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯುಪಿಐ ಪಾವತಿ ವ್ಯವಸ್ಥೆ ನಗರ ಪ್ರದೇಶಗಳಷ್ಟೇ ಅಲ್ಲದೆ ಗ್ರಾಮೀಣ ಭಾಗಗಳಲ್ಲಿಯೂ ವ್ಯಾಪಕವಾಗಿ ಬಳಕೆಯಾಗುತ್ತಿದೆ. ದಿನಸಿ ಅಂಗಡಿಗಳು, ಹೋಟೆಲ್‌ಗಳು, ಮೆಡಿಕಲ್ ಶಾಪ್‌ಗಳು, ಬಟ್ಟೆ ಅಂಗಡಿಗಳು ಸೇರಿದಂತೆ ಸಣ್ಣ ವ್ಯಾಪಾರಿಗಳಲ್ಲೂ ಗ್ರಾಹಕರು ಮೊಬೈಲ್ ಮೂಲಕ ಯುಪಿಐ ಪಾವತಿ ಮಾಡುವುದು ಸಾಮಾನ್ಯವಾಗಿದೆ. ಇಂತಹ ಸಂದರ್ಭದಲ್ಲಿ ವ್ಯಾಪಾರಿ ವಹಿವಾಟುಗಳಿಗೆ ಶುಲ್ಕ ವಿಧಿಸುವುದರಿಂದ ಸಣ್ಣ ವ್ಯಾಪಾರಿಗಳ ಮೇಲಿನ ವೆಚ್ಚ ಹೆಚ್ಚಾಗುವ ಸಾಧ್ಯತೆಯಿದೆ ಎಂದರು. ಹೊಸ ಶುಲ್ಕ ವ್ಯವಸ್ಥೆಯಿಂದ ಡಿಜಿಟಲ್ ಪಾವತಿಗಳ ವೆಚ್ಚ ಹೆಚ್ಚಾಗಬಹುದು. ಗ್ರಾಹಕರಿಗೆ ನೇರವಾಗಿ ಶುಲ್ಕ ವಿಧಿಸದಿದ್ದರೂ, ವ್ಯಾಪಾರಿಗಳ ಮೇಲಿನ ಹೆಚ್ಚುವರಿ ವೆಚ್ಚವನ್ನು ವಸ್ತುಗಳ ಬೆಲೆಯಲ್ಲಿ ಸೇರಿಸುವ ಸಾಧ್ಯತೆಯಿದ್ದು, ಇದರಿಂದ ಪರೋಕ್ಷವಾಗಿ ಗ್ರಾಹಕರ ಮೇಲೂ ಪರಿಣಾಮ ಬೀರಬಹುದು ಎಂದು ಅವರು ಹೇಳಿದರು.

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಕೂಡ ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿದ್ದು, ₹2,000ಕ್ಕಿಂತ ಹೆಚ್ಚಿನ ವ್ಯಾಪಾರಿ ಯುಪಿಐ ವಹಿವಾಟುಗಳಿಗೆ MDR ವಿಧಿಸುವ ಕ್ರಮವನ್ನು ವಿರೋಧಿಸಿದ್ದಾರೆ. ಭಾರತದಲ್ಲಿನ ಶೂನ್ಯ MDR ವ್ಯವಸ್ಥೆಗೆ ಸಂಬಂಧಿಸಿದಂತೆ ಅಮೆರಿಕದ ಪಾವತಿ ಕಂಪನಿಗಳ ಒತ್ತಡವಿದೆ ಎಂಬ ಆರೋಪವನ್ನೂ ಅವರು ಮಾಡಿದ್ದಾರೆ.

ಡಿಜಿಟಲ್ ಪಾವತಿಗಳನ್ನು ಉತ್ತೇಜಿಸುವ ನಿಟ್ಟಿನಲ್ಲಿ ಜಾರಿಯಲ್ಲಿರುವ ಶೂನ್ಯ MDR ವ್ಯವಸ್ಥೆಯನ್ನು ಮುಂದುವರಿಸಬೇಕು. ಸಣ್ಣ ವ್ಯಾಪಾರಿಗಳು ಹಾಗೂ ಸಾಮಾನ್ಯ ಗ್ರಾಹಕರ ಹಿತದೃಷ್ಟಿಯಿಂದ ಹೊಸ ಶುಲ್ಕ ವ್ಯವಸ್ಥೆಯನ್ನು ಹಿಂಪಡೆಯಬೇಕು ಎಂದು ಸಂಗನಗೌಡ ಜಿ. ಪಾಟೀಲ ಒತ್ತಾಯಿಸಿದ್ದಾರೆ.

## ಗಣತಿ ಕಾರ್ಯ ಮಾಡಿದ ಶಿಕ್ಷಕರಿಗೆ ಗಳಿಕೆ ರಜೆ ನೀಡಿ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರಜೆ ಅವಧಿಯಲ್ಲಿ ವಿವಿಧ ಗಣತಿ ಕಾರ್ಯಗಳಲ್ಲಿ ಕರ್ತವ್ಯ ನಿರ್ವಹಿಸಿದ ಶಿಕ್ಷಕರಿಗೆ ನಿಯಮಾನುಸಾರ ಗಳಿಕೆ ರಜೆ ಮಂಜೂರು ಮಾಡುವಂತೆ ಒತ್ತಾಯಿಸಿ ಶಿಕ್ಷಕರ ಸಂಘದ ಪದಾಧಿಕಾರಿಗಳು ತಹಸೀಲ್ದಾರ್ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

2025ರ ಏಪ್ರಿಲ್-ಮೇ ತಿಂಗಳ ರಜೆ ಅವಧಿಯಲ್ಲಿ ನ್ಯಾಯಮೂರ್ತಿ ನಾಗಮೋಹನ್ ದಾಸ್ ಅವರ ನೇತೃತ್ವದಲ್ಲಿ ನಡೆದ ಪರಿಶಿಷ್ಟ ಜಾತಿ ಗಣತಿ ಕಾರ್ಯ, 2025ರ ಅಕ್ಟೋಬರ್‌ನಲ್ಲಿ ನಡೆದ ಶೈಕ್ಷಣಿಕ, ಆರ್ಥಿಕ ಮತ್ತು ಸಾಮಾಜಿಕ ಗಣತಿ ಹಾಗೂ 2026ರ ಏಪ್ರಿಲ್-ಮೇ ತಿಂಗಳಲ್ಲಿ ನಡೆದ ಭಾರತ ಜನಗಣತಿ ಮನೆಪಟ್ಟಿ ಕಾರ್ಯಗಳಲ್ಲಿ ಶಿಕ್ಷಕರು ಕರ್ತವ್ಯ ನಿರ್ವಹಿಸಿದ್ದರು.

ರಜೆ ಅವಧಿಯಲ್ಲಿಯೇ ಗಣತಿ ಕಾರ್ಯಗಳನ್ನು ನಿರ್ವಹಿಸಿರುವ ಶಿಕ್ಷಕರಿಗೆ ನಿಯಮಾನುಸಾರ ಗಳಿಕೆ ರಜೆ ಮಂಜೂರು ಮಾಡಲು ಶೀಘ್ರ ಆದೇಶ ಹೊರಡಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಯಿತು. ಮನವಿಗೆ ಅಧಿಕಾರಿಗಳು ಸಕಾರಾತ್ಮಕವಾಗಿ ಸ್ಪಂದಿಸಿ, ಶೀಘ್ರ ಅಗತ್ಯ ಆದೇಶ ಹೊರಡಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಲಕ್ಷ್ಮೇಶ್ವರ ತಾಲೂಕು ಅಧ್ಯಕ್ಷ ಗುರುರಾಜ ಹವಳದ, ಖಜಾಂಚಿ ಎಂ.ಡಿ. ವಾರದ, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಘಟಕದ ಅಧ್ಯಕ್ಷ ಎಂ.ಎನ್. ಭರಮಗೌಡ್ರ, ಪ್ರಧಾನ ಕಾರ್ಯದರ್ಶಿ ಶ್ರೀಕಾಂತ ನಂದೆಣ್ಣವರ, ಅವಳಿ ಸಂಘದ ನಿರ್ದೇಶಕರಾದ ಎ.ಎಂ. ಅಕ್ಕಿ, ಎಚ್.ಬಿ. ಪಟ್ಟಣದ, ಬಿ.ಎಂ. ಯರಗುಪ್ಪಿ, ಎಸ್.ವಿ. ಸೋಗಿ, ಮುತ್ತಣ್ಣ ಹುಬ್ಬಳ್ಳಿ, ಎಫ್.ಎಸ್. ತಳವಾರ ಹಾಗೂ ಶಿವಾನಂದ ಅಸುಂಡಿ ಉಪಸ್ಥಿತರಿದ್ದರು.

## ವಯೋವೃದ್ಧರ ಮನೆಬಾಗಿಲಿಗೆ ಅಧಿಕಾರಿಗಳು



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯ ಅಂಗವಾಗಿ ಮತಗಟ್ಟೆಗೆ ಆಗಮಿಸಲು ಸಾಧ್ಯವಾಗದ ವಯೋವೃದ್ಧರು ಹಾಗೂ ಅನಾರೋಗ್ಯಪೀಡಿತರ ಮನೆಗಳಿಗೆ ಅಧಿಕಾರಿಗಳು ತೆರಳಿ ವಿಚಾರಣೆ ನಡೆಸಿದರು.

ತಾಲೂಕಿನ ಶಿಗ್ಲಿ ಮತಗಟ್ಟೆ ಸಂಖ್ಯೆ 211ರ ವ್ಯಾಪ್ತಿಯಲ್ಲಿ ನಡೆದ ಮನೆಭೇಟಿ ವಿಚಾರಣೆಯಲ್ಲಿ ವಿಬಿಜಿ ರಾಮ್ ಜಿ ಹಾಗೂ ಸಹಾಯಕ ನಿರ್ದೇಶಕ ಕೃಷ್ಣಪ್ಪ ಧರ್ಮರ ಪ್ರಮುಖವಾಗಿ ಭಾಗವಹಿಸಿ, ಅರ್ಹ ಮತದಾರರ ವಿವರಗಳನ್ನು ಪರಿಶೀಲಿಸಿದರು.

ಅಧಿಕಾರಿಗಳು ಮತದಾರರಿಂದ ನೇರವಾಗಿ ಮಾಹಿತಿ ಪಡೆದು ಹೆಸರು, ವಿಳಾಸ ಸೇರಿದಂತೆ ಮತದಾರರ ಪಟ್ಟಿಗೆ ಸಂಬಂಧಿಸಿದ ವಿವರಗಳನ್ನು ಪರಿಶೀಲಿಸಿದರು.

ಅಗತ್ಯ ದಾಖಲಾತಿಗಳನ್ನು ಪರಿಶೀಲಿಸಿ, ಅವುಗಳಲ್ಲಿನ ಮಾಹಿತಿಯನ್ನು ಮತದಾರರ ವಿವರಗಳೊಂದಿಗೆ ತಾಳೆ ಮಾಡಲಾಯಿತು.

ವಯಸ್ಸು, ಅನಾರೋಗ್ಯ ಹಾಗೂ ಇತರ ಕಾರಣಗಳಿಂದ ಮತಗಟ್ಟೆಗೆ ಖುದ್ದಾಗಿ ಬಂದು ವಿಚಾರಣೆಗೆ ಹಾಜರಾಗಲು ಸಾಧ್ಯವಾಗದವರ ಅನುಕೂಲಕ್ಕಾಗಿ ಮನೆಭೇಟಿ ಮೂಲಕ ಪರಿಶೀಲನೆ ನಡೆಸಲಾಯಿತು. ಈ ವೇಳೆ ಅಗತ್ಯ ಮಾಹಿತಿಯನ್ನು ಸ್ಥಳದಲ್ಲಿಯೇ ದಾಖಲಿಸಿಕೊಳ್ಳಲಾಯಿತು.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಯಾವುದೇ ಅರ್ಹ ಮತದಾರರು ಅವಕಾಶದಿಂದ ವಂಚಿತ ರಾಗದಂತೆ ಹಾಗೂ ಮತದಾರರ ಪಟ್ಟಿಯಲ್ಲಿನ ವಿವರಗಳು ಸಮರ್ಪಕವಾಗಿರುವುದನ್ನು ಖಚಿತಪಡಿಸಿಕೊಳ್ಳುವ ಉದ್ದೇಶದಿಂದ ಮನೆಭೇಟಿ ವಿಚಾರಣೆಗೆ ಆದ್ಯತೆ ನೀಡಲಾಗಿದೆ.

### ಲಕ್ಷ್ಮೇಶ್ವರದಲ್ಲಿ ಸಡಗರದ ಹಬ್ಬ; 20ಕ್ಕೂ ಹೆಚ್ಚು ಕಡೆ ಬೃಹತ್ ಗಣೇಶ ಮೂರ್ತಿ ಪ್ರತಿಷ್ಠಾಪನೆ

# ಬರಗಾಲದ ನಡುವೆಯೂ ಭಕ್ತಿಯ ಗಣೇಶೋತ್ಸವ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬರಗಾಲದ ಸಂಕಷ್ಟದ ನಡುವೆಯೂ ರೈತರು ಸೇರಿದಂತೆ ಜನಸಮುದಾಯ ವಿಘ್ನನಾಶಕ ಶ್ರೀ ಗಣೇಶನ ಚತುರ್ಥಿಯನ್ನು ಸಂಪ್ರದಾಯ ಹಾಗೂ ಸಂಭ್ರಮದಿಂದ ಆಚರಿಸಿದರು.

ಲಕ್ಷ್ಮೇಶ್ವರ ಪಟ್ಟಣ ಸೇರಿದಂತೆ ಶಿಗ್ಲಿ, ಆದರಹಳ್ಳಿ, ಸೂರಣಗಿ, ಬಾಲೆಹೊಸೂರು, ರಾಮಗೇರಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಗಣೇಶ ಮೂರ್ತಿಗಳನ್ನು ಸಡಗರದಿಂದ ಬರಮಾಡಿಕೊಂಡು ಶ್ರದ್ಧಾ-ಭಕ್ತಿಯಿಂದ ಪ್ರತಿಷ್ಠಾಪಿಸಲಾಯಿತು.

ಶಿಗ್ಲಿಯ ಎಸ್.ಎಸ್. ಕೂಡ್ಲಮಠ ಪ್ರೌಢಶಾಲೆಯ ವಿದ್ಯಾರ್ಥಿಗಳು ಜನಪದ ಗೀತೆಗಳಿಗೆ ಹೆಜ್ಜೆ ಹಾಕುತ್ತ ಗಣೇಶ ಮೂರ್ತಿಯನ್ನು ಮೆರವಣಿಗೆಯಲ್ಲಿ ಶಾಲೆಗೆ ಕರೆತಂದರು. ಪಟ್ಟಣದ ಮಾರುಕಟ್ಟೆಯಲ್ಲಿ ಗಣೇಶ ಮೂರ್ತಿ, ಹೂವು, ಹಣ್ಣು, ತಳಿರು-ತೋರಣ ಹಾಗೂ ಅಲಂಕಾರಿಕ ವಸ್ತುಗಳ ಖರೀದಿ ಭರಾಟೆ ಜೋರಾಗಿತ್ತು.

ಈ ಬಾರಿ ಬಹುತೇಕ ಮನೆಗಳಲ್ಲಿ ಪರಿಸರ ಸ್ನೇಹಿ ಗಣೇಶ ಮೂರ್ತಿಗಳಿಗೆ ಆದ್ಯತೆ ನೀಡಿರುವುದು ಗಮನ ಸೆಳೆಯಿತು. ಸಾರ್ವಜನಿಕ ಗಣೇಶೋತ್ಸವ ಸಮಿತಿಗಳು ವಿವಿಧ ರೂಪಗಳ ಬೃಹತ್ ಮೂರ್ತಿಗಳನ್ನು ಡಿಜೆ ಸದ್ದಿನೊಂದಿಗೆ ಮೆರವಣಿಗೆಯಲ್ಲಿ ಕರೆತಂದು ಪ್ರತಿಷ್ಠಾಪಿಸಿದವು.


ಭಾನು ಮಾರ್ಕೆಟ್, ಹಾವಳಿ ಆಂಜನೇಯ ದೇವಸ್ಥಾನ, ಎಪಿಎಂಸಿ, ತೇರಿನ ಮನೆ ಆವರಣ, ರಾಘವೇಂದ್ರ ಸ್ವಾಮಿಗಳ ಮಠ, ಹಳ್ಳದಕೇರಿ, ಡಾ. ಬಿ.ಆರ್. ಅಂಬೇಡ್ಕರ್ ನಗರ, ಸೊಪ್ಪಿನಕೇರಿ, ಕದರಗೇರಿ, ಡೋಹರಗಲ್ಲಿ ಸೇರಿದಂತೆ 20ಕ್ಕೂ ಹೆಚ್ಚು ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಲಾಯಿತು.

ಗುರುವಾರ ಗಣೇಶನ ವಾಹನ ಮೂಷಿಕನ ಪೂಜೆಯೂ ಸಂಭ್ರಮದಿಂದ ನಡೆಯಿತು. ಮನೆಗಳಲ್ಲಿ ಕರಿಗೆಡುಬು ಸಿದ್ಧಪಡಿಸಿ ಮೂಷಿಕನಿಗೆ ನೈವೇದ್ಯ ಸಮರ್ಪಿಸಲಾಯಿತು.















# ನರೇಗಲ್ಲಿನೆಲ್ಲೆಡೆ ಗಜಾನನನ ಭಕ್ತಿ ವೈಭವ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಗಣೇಶ ಚತುರ್ಥಿ ಅಂಗವಾಗಿ ನರೇಗಲ್ಲ ಪಟ್ಟಣದ ವಿವಿಧ ಓಣಿಗಳು, ಸರ್ಕಾರಿ ಕಚೇರಿಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಶ್ರೀ ಗಣೇಶ ಮೂರ್ತಿಗಳನ್ನು ಶ್ರದ್ಧಾ-ಭಕ್ತಿಯಿಂದ ಪ್ರತಿಷ್ಠಾಪಿಸಲಾಗಿದ್ದು, ಪಟ್ಟಣದೆಲ್ಲೆಡೆ ಹಬ್ಬದ ಸಂಭ್ರಮ ಮನೆಮಾಡಿದೆ. ವಿವಿಧ ವಿನ್ಯಾಸ ಹಾಗೂ ಅಲಂಕಾರಗಳಲ್ಲಿ ಕಂಗೊಳಿಸುತ್ತಿರುವ ಗಜಾನನನ ಮೂರ್ತಿಗಳು ಭಕ್ತರ ಗಮನ ಸೆಳೆಯುತ್ತಿವೆ.






# ಪೊಲೀಸ್ ಠಾಣೆಯಲ್ಲಿ ಶ್ರದ್ಧಾ-ಭಕ್ತಿಯಿಂದ ಗಣೇಶೋತ್ಸವ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**


ಗಣೇಶ ಚತುರ್ಥಿ ಅಂಗವಾಗಿ ಪಟ್ಟಣದ ಪೊಲೀಸ್ ಠಾಣೆಯಲ್ಲಿ ಗಣೇಶೋತ್ಸವವನ್ನು ಶ್ರದ್ಧಾ-ಭಕ್ತಿಯಿಂದ ಆಚರಿಸಲಾಯಿತು.

ಪೊಲೀಸ್ ಠಾಣೆ ಸಿಬ್ಬಂದಿ ಗಣೇಶ ಮೂರ್ತಿಯನ್ನು ಸಾಂಪ್ರದಾಯಿಕ ಮೆರವಣಿಗೆಯಲ್ಲಿ ಕರೆತಂದು ವಿಧಿವಿಧಾನಗಳೊಂದಿಗೆ ಪ್ರತಿಷ್ಠಾಪಿಸಿದರು. ಬಳಿಕ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಾಮೂಹಿಕವಾಗಿ ವಿಶೇಷ ಪೂಜೆ, ಪುಷ್ಪಾರ್ಚನೆ ಹಾಗೂ ಆರತಿ ನೆರವೇರಿಸಿ, ನಾಡಿನಲ್ಲಿ ಶಾಂತಿ, ಸೌಹಾರ್ದತೆ, ಸುಖ-ಸಮೃದ್ಧಿ ನೆಲೆಸಲಿ ಎಂದು ಪ್ರಾರ್ಥಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಿಪಿಐ ಬಿ.ವಿ. ನ್ಯಾಮಗೌಡ, ಗಣೇಶೋತ್ಸವ ಎಲ್ಲರನ್ನು ಒಗ್ಗೂಡಿಸುವ ಸೌಹಾರ್ದತೆಯ ಹಬ್ಬವಾಗಬೇಕು. ಭಕ್ತಿ ಮತ್ತು ಶಿಸ್ತಿನೊಂದಿಗೆ ಹಬ್ಬ ಆಚರಿಸುವ ಜತೆಗೆ ಪರಸ್ಪರ ಗೌರವ ಹಾಗೂ ಸಹಬಾಳ್ವೆಗೆ ಆದ್ಯತೆ ನೀಡಬೇಕು. ಶಾಂತಿ, ಸೌಹಾರ್ದತೆ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಸಾರ್ವಜನಿಕರ ಸಹಕಾರ ಅಗತ್ಯ ಎಂದರು.

ಪಿಎಸ್‌ಐ ಆನಂದ ಕ್ಯಾರಕಟ್ಟಿ, ಟಿ.ಕೆ. ರಾಠೋಡ ಸೇ-ರಿದಂತೆ ಪೊಲೀಸ್ ಠಾಣೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

### ಯುವಕರು ಧರ್ಮ, ಶಿಕ್ಷಣ, ರಾಷ್ಟ್ರ ಪ್ರೇಮ ಬೆಳೆಸಿಕೊಳ್ಳಲಿ: ರಂಭಾಪುರಿ ಜಗದ್ಗುರು

# ಧರ್ಮ ರಕ್ಷಣೆಯೇ ವೀರಭದ್ರನ ಸಂದೇಶ



**ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಸಮಾಜದಲ್ಲಿ ಅಸಮಾನತೆ, ಅಶಾಂತಿ ಹಾಗೂ ಮೌಲ್ಯಗಳ ಕುಸಿತ ಹೆಚ್ಚುತ್ತಿರುವ ಸಂದರ್ಭದಲ್ಲಿ ಶ್ರೀ ವೀರಭದ್ರಸ್ವಾಮಿಯ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಅಗತ್ಯವಾಗಿದೆ. ಯುವಕರು ಧರ್ಮದ ಜತೆಗೆ ಆಧುನಿಕ ಶಿಕ್ಷಣ, ಸಾಮಾಜಿಕ ಜವಾಬ್ದಾರಿ ಹಾಗೂ ರಾಷ್ಟ್ರಪ್ರೇಮವನ್ನು ಬೆಳೆಸಿಕೊಳ್ಳಬೇಕು ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ನಗರದ ವಿದ್ಯಾನಗರದಲ್ಲಿರುವ ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಸಮುದಾಯ ಭವನದ ಆವರಣದಲ್ಲಿ ಮಂಗಳವಾರ ನಡೆದ ಶ್ರೀ ವೀರಭದ್ರೇಶ್ವರ ಜಯಂತ್ಯುತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ವೀರಭದ್ರ ಎಂದರೆ ಕೇವಲ ಶಸ್ತ್ರಧಾರಿ ದೈವದ ರೂಪವಲ್ಲ. ಧರ್ಮ ರಕ್ಷಣೆ ಹಾಗೂ ದುಷ್ಟ ಶಕ್ತಿಗಳ ದಮನವೇ ವೀರಭದ್ರಸ್ವಾಮಿಯ ಅವತಾರದ ಮೂಲ ಉದ್ದೇಶ. ವಿವೇಕ, ಧೈರ್ಯ, ಶಿಸ್ತು, ಕರ್ತವ್ಯನಿಷ್ಠೆ ಹಾಗೂ ಧರ್ಮಬದ್ಧ ಜೀವನವೇ ನಿಜವಾದ ವೀರತ್ವವಾಗಿದೆ ಎಂದರು.

> ವಿವೇಕ, ಧೈರ್ಯ, ಶಿಸ್ತು, ಕರ್ತವ್ಯನಿಷ್ಠೆ ಮತ್ತು ಧರ್ಮಬದ್ಧ ಜೀವನವೇ ನಿಜವಾದ ವೀರತ್ವ. ವೀರಭದ್ರನ ಆದರ್ಶಗಳನ್ನು ಯುವಕರು ಬದುಕಿನಲ್ಲಿ ಅಳವಡಿಸಿಕೊಂಡು ಧರ್ಮ, ಸಂಸ್ಕೃತಿ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸಬೇಕು.
>
> – ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು

ವೀರಭದ್ರೇಶ್ವರ ದೇವಾಲಯಗಳು ಕೇವಲ ಪೂಜಾ ಕೇಂದ್ರಗಳಲ್ಲ. ಅವು ಜನಪರ ಸಂಸ್ಕೃತಿ, ಶೈವ ಪರಂಪರೆ, ಕಲೆ, ಆಚರಣೆಗಳು ಹಾಗೂ ಸಮುದಾಯದ ಐತಿಹಾಸಿಕ ನೆನಪುಗಳನ್ನು ಉಳಿಸಿಕೊಂಡಿರುವ ಸಾಂಸ್ಕೃತಿಕ ಕೇಂದ್ರಗಳಾಗಿವೆ. ಶ್ರೀ ವೀರಭದ್ರಸ್ವಾಮಿ ರಂಭಾಪುರಿ ಪೀಠದ ಕ್ಷೇತ್ರನಾಥ ಹಾಗೂ ಗೋತ್ರಪುರುಷನಾಗಿ ಪೂಜೆಗೊಳ್ಳುತ್ತಿದ್ದಾನೆ. ನಾಡಿನ ಯಾವುದೇ ಭಾಗದಲ್ಲಿ ಶ್ರೀ ವೀರಭದ್ರಸ್ವಾಮಿ ನೆಲೆಗೊಂಡಿದ್ದರೂ, ಆತನ ಮೂಲ ಶಕ್ತಿಕೇಂದ್ರ ರಂಭಾಪುರಿ ಕ್ಷೇತ್ರವಾಗಿದೆ ಎಂದು ತಿಳಿಸಿದರು.

ಜಾತಿ, ಪ್ರದೇಶ ಹಾಗೂ ಪಕ್ಷಭೇದಗಳನ್ನು ಮೀರಿ ಧರ್ಮ, ಸಂಸ್ಕೃತಿ ಮತ್ತು ಮಾನವೀಯ ಮೌಲ್ಯಗಳ ಆಧಾರದ ಮೇಲೆ ಸಮಾಜ ಕಟ್ಟುವ ಸಂಕಲ್ಪವನ್ನು ಜಯಂತ್ಯುತ್ಸವದ ಮೂಲಕ ಕೈಗೊಳ್ಳಬೇಕು. ವೀರಭದ್ರನ ಶೌರ್ಯ ನಮ್ಮಲ್ಲಿ ಧೈರ್ಯ, ಶಿವನ ತತ್ವ ಜ್ಞಾನ ಹಾಗೂ ಧರ್ಮದ ಮಾರ್ಗ ಸದಾಚಾರವನ್ನು ಬೆಳೆಸಲಿ ಎಂದು ಜಗದ್ಗುರುಗಳು ಆಶಿಸಿದರು.

ಸದಾನಂದ ಡಂಗನವರ, ಚಂದ್ರಶೇಖರ ಜುಟ್ಟಲ, ವಿ.ಜಿ. ಪಾಟೀಲ, ಆರ್.ಎಂ. ಹಿರೇಮಠ, ಬಂಗಾರೇಶ ಹಿರೇಮಠ, ಬಸವರಾಜ ಸುಳ್ಳದ, ಡಾ. ರಾಮು ಮೂಲಗಿ, ಸಂಶಿ ಉಮೇಶ, ಸುಮಂಗಲಾ ಹಿರೇಮಠ ಸೇರಿದಂತೆ ಗಣ್ಯರು ಪಾಲ್ಗೊಂಡಿದ್ದರು. ಮ್ಯಾನೇಜರ್ ಜಿ.ವಿ. ಹಿರೇಮಠ ಸ್ವಾಗತಿಸಿ, ನಿರೂಪಿಸಿದರು.

### ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದಿಂದ ಶಿಕ್ಷಕರ ದಿನಾಚರಣೆ

# ಉತ್ತಮ ಶಿಕ್ಷಕರು ಪ್ರಭಾವ ಬೀರುವ ಶಕ್ತಿಗಳು

**ವಿಜಯಸಾಕ್ಷಿ ಸುದ್ದಿ, ಗದಗ**

ಶಿಕ್ಷಕರು ಕೇವಲ ಪಾಠ ಬೋಧನೆಗೆ ಸೀಮಿತರಲ್ಲ. ವಿದ್ಯಾರ್ಥಿಗಳ ಜ್ಞಾನಾಭಿವೃದ್ಧಿ, ವ್ಯಕ್ತಿತ್ವ ವಿಕಸನ, ಚಿಂತನಶೀಲತೆ ಹಾಗೂ ಜೀವನ ಮೌಲ್ಯಗಳನ್ನು ರೂಪಿಸುವ ಮೂಲಕ ಆಧುನಿಕ ಸಮಾಜದ ನಿರ್ಮಾತೃಗಳಾಗಿ ಕಾರ್ಯನಿರ್ವಹಿಸುತ್ತಾರೆ ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ ಹೇಳಿದರು.

ನಗರದ ತೋಂಟದಾರ್ಯ ಮಠದ ಅನುಭವ ಮಂಟಪದಲ್ಲಿ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ವತಿಯಿಂದ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಹಾಗೂ ಸನ್ಮಾನ ಕಾರ್ಯಕ್ರಮದಲ್ಲಿ 'ಶಿಕ್ಷಕರು ಆಧುನಿಕ ಸಮಾಜದ ನಿರ್ಮಾತೃಗಳು' ವಿಷಯ ಕುರಿತು ಉಪನ್ಯಾಸ ನೀಡಿ ಅವರು ಮಾತನಾಡಿದರು.

ಉತ್ತಮ ಶಿಕ್ಷಕರು ವಿದ್ಯಾರ್ಥಿಗಳ ಮೇಲೆ ಆಳವಾದ ಪ್ರಭಾವ ಬೀರುವ ಶಕ್ತಿಯಾಗಿದ್ದಾರೆ. ಶಿಕ್ಷಕರಿಂದ ಜ್ಞಾನ ಹಾಗೂ ಮೌಲ್ಯಗಳನ್ನು ಕಲಿತ ವಿದ್ಯಾರ್ಥಿಗಳು ಮುಂದೆ ಉನ್ನತ ಹುದ್ದೆಗಳಲ್ಲಿ ಸೇವೆ ಸಲ್ಲಿಸಿ ದೇಶದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡುತ್ತಾರೆ. ಹೀಗಾಗಿ ಶಿಕ್ಷಕರು ರಾಷ್ಟ್ರದ ಉಜ್ವಲ ಭವಿಷ್ಯ ರೂಪಿಸುವ ಪ್ರಮುಖ ಶಕ್ತಿಯಾಗಿದ್ದಾರೆ ಎಂದರು.

ಮೈಸೂರು ವಿವೇಕಾನಂದ ಯೋಗ ಎಜುಕೇಷನ್ ಆ್ಯಂಡ್ ರಿಸರ್ಚ್ ಇನ್‌ಸ್ಟಿಟ್ಯೂಟ್‌ನಿಂದ ರಾಜಯೋಗಿ ಟಿ. ಕೃಷ್ಣಮಾಚಾರ್ಯ ಪ್ರಶಸ್ತಿ-2026 ಪಡೆದ ಯೋಗಾಚಾರ್ಯ ಕೆ.ಎಸ್. ಪಲ್ಲೇದ ಮಾತನಾಡಿ, ಉತ್ತಮ ಶಿಕ್ಷಕರು ಉತ್ತಮ ವಿದ್ಯಾರ್ಥಿಗಳನ್ನು ರೂಪಿಸುವ ಮೂಲಕ ಸಮಾಜ ನಿರ್ಮಾಣದ ಕಾರ್ಯಕ್ಕೆ ಕೈಜೋಡಿಸುತ್ತಾರೆ. ವಿದ್ಯಾರ್ಥಿಗಳನ್ನು ಮೌಲ್ಯಯುತ ನಾಗರಿಕರನ್ನಾಗಿ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ. ಉತ್ತಮ ನಾಗರಿಕರಿಂದ ಉತ್ತಮ ಸಮಾಜ ನಿರ್ಮಾಣವಾಗುತ್ತದೆ. ಶಿಕ್ಷಕರು ಸಮಾಜದ ಮಾರ್ಗದರ್ಶಕರಾಗಿ ಜ್ಞಾನ ದೀವಿಗೆ ಬೆಳಗಿಸುವ ನಿರಂತರ ಜ್ಯೋತಿಗಳಾಗಿದ್ದಾರೆ ಎಂದರು.



ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ಜಯಶ್ರೀ ಉಗಲಾಟ ಅಧ್ಯಕ್ಷತೆ ವಹಿಸಿ ಮಾತನಾಡಿ, ಶಿಕ್ಷಕರು ಮಕ್ಕಳಿಗೆ ವಿದ್ಯಾಭ್ಯಾಸ ನೀಡುವುದರ ಜತೆಗೆ ಅವರನ್ನು ಸುಶಿಕ್ಷಿತರನ್ನಾಗಿ ರೂಪಿಸುತ್ತಾರೆ. ನಮ್ಮೆಲ್ಲರ ಬದುಕಿಗೆ ಗುರುಗಳು ಆದರ್ಶವಾಗಿದ್ದು, ಅವರ ಸೇವೆಯನ್ನು ಸ್ಮರಿಸಿ ಶಿಕ್ಷಕರ ದಿನಾಚರಣೆ ಸಂದರ್ಭದಲ್ಲಿ ಸನ್ಮಾನಿಸಿ ಗೌರವಿಸಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಉತ್ತಮ ಶಿಕ್ಷಕಿ ಪ್ರಶಸ್ತಿ ವಿಜೇತೆ ಭಾರತಿ ಕುಲಕರ್ಣಿ, ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ, ಯೋಗಾಚಾರ್ಯ ಕೆ.ಎಸ್. ಪಲ್ಲೇದ, ಯೋಗ ಶಿಕ್ಷಕರಾದ ಸುನಂದಾ ಜಾನೋಪಂತರ, ಜಯಶ್ರೀ ಡಾವಣಗೆರೆ ಹಾಗೂ ಲಕ್ಷ್ಮೀ ನಿಡವಣಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಸನ್ಮಾನಿತರು ಕೃತಜ್ಞತೆ ಸಲ್ಲಿಸಿ ಮಾತನಾಡಿದರು.

ಅರುಣಾ ಹಳಕಟ್ಟಿ ವಚನ ಪ್ರಾರ್ಥನೆ ನೆರವೇರಿಸಿದರು. ಶಾರದಾ ಬೊಮ್ಮಸಾಗರ ನಿರೂಪಿಸಿದರು. ರೇಣುಕಾ ಅಮಾತ್ಯ ಹಾಗೂ ಶಶಿಕಲಾ ಮಾಲೀಪಾಟೀಲ ಪರಿಚಯಿಸಿದರು. ಸುಗ್ಗಲಾ ಯಳಮಲಿ ಕಾರ್ಯಕ್ರಮ ನಿರ್ವಹಿಸಿದರು. ಪುಷ್ಪಾ ಬಂಡಾರಿ ವಂದಿಸಿದರು. ಗೌರವ ಅಧ್ಯಕ್ಷರಾದ ನಿರ್ಮಲಾ ಪಾಟೀಲ, ಅಕ್ಕಮಹಾದೇವಿ ಚಟ್ಟಿ, ಸದಸ್ಯರಾದ ಶೀಲಾ ಗೋಟಡಕಿ, ಶಾರದಾ ಸಜ್ಜನರ, ಜಯಶ್ರೀ ಹುಬ್ಬಳ್ಳಿ, ಅಕ್ಕಮ್ಮ ವಸ್ತ್ರದ, ಶಕುಂತಲಾ ಹಿರೇಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸಣ್ಣ ಸುದ್ದಿಗಳು

### ಹಸ್ತಪ್ರತಿ, ಶಾಸನ, ನಾಣ್ಯಗಳ ಅಧ್ಯಯನದಿಂದ ಹೊಸ ಸತ್ಯ ಅನಾವರಣ: ಡಾ. ಲೋಕೇಶ

# ದಾಖಲೆಗಳೇ ಇತಿಹಾಸದ ಜೀವಾಳ



**ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ಇತಿಹಾಸ ಅಧ್ಯಯನ ಕೇವಲ ಪಠ್ಯಪುಸ್ತಕಗಳಿಗೆ ಸೀಮಿತವಾಗದೆ, ಪುರಾತನ ಹಸ್ತಪ್ರತಿಗಳು, ಶಾಸನಗಳು, ನಾಣ್ಯಗಳು ಹಾಗೂ ಐತಿಹಾಸಿಕ ದಾಖಲೆಗಳ ಅಧ್ಯಯನದ ಮೂಲಕ ಹೊಸ ಸತ್ಯಗಳನ್ನು ಅನಾವರಣಗೊಳಿಸುವಂತಿರಬೇಕು ಎಂದು ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ಪ್ರಾಚೀನ ಭಾರತದ ಇತಿಹಾಸ ಮತ್ತು ಶಾಸನವಿಜ್ಞಾನ ವಿಭಾಗದ ಮುಖ್ಯಸ್ಥ, ಹಿರಿಯ ಪ್ರಾಧ್ಯಾಪಕ ಡಾ. ಲೋಕೇಶ ಹೇಳಿದರು. ಹುಲಕೋಟಿಯ ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ವಿಭಾಗದ 2026–27ನೇ ಸಾಲಿನ ಕಾರ್ಯಚಟುವಟಿಕೆಗಳ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳಲ್ಲಿ ಇತಿಹಾಸದ ಬಗ್ಗೆ ಆಸಕ್ತಿ ಹಾಗೂ ಸಂಶೋಧನಾ ಮನೋಭಾವ ಬೆಳೆಸಲು ವಿಶೇಷ ಉಪನ್ಯಾಸ, ಚರ್ಚಾಗೋಷ್ಠಿ, ವಿಚಾರ ಸಂಕಿರಣ ಮತ್ತು ಪ್ರಬಂಧ ಮಂಡನೆಗಳನ್ನು ಆಯೋಜಿಸಬೇಕು ಎಂದು ಸಲಹೆ ನೀಡಿದರು. ಇತಿಹಾಸ ವಿಭಾಗದ ಮುಖ್ಯಸ್ಥೆ ರೋಹಿಣಿ ರಾಚಣ್ಣವರ ಮಾತನಾಡಿ, ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಹಾಗೂ ಪ್ರತ್ಯಕ್ಷ ಜ್ಞಾನ ನೀಡಲು ಐತಿಹಾಸಿಕ ಸ್ಥಳಗಳು, ಕೋಟೆಗಳು, ಅರಮನೆಗಳು ಹಾಗೂ ಯುದ್ಧಭೂಮಿಗಳಿಗೆ ಶೈಕ್ಷಣಿಕ ಪ್ರವಾಸ ಆಯೋಜಿಸಲಾಗುವುದು. ಪುರಾತತ್ವ ಇಲಾಖೆಯ ಸಹಯೋಗದಲ್ಲಿ ಉತ್ಖನನ ಕಾರ್ಯಗಳನ್ನು ವೀಕ್ಷಿಸಲು ಅವಕಾಶ ಕಲ್ಪಿಸಲಾಗುವುದು ಎಂದರು. ಉಪನ್ಯಾಸಕ ಡಾ. ಶಂಕ್ರಪ್ಪ ಬಡಿಗೇರ ಮಾತನಾಡಿ, ಸಮೀಪದ ವಸ್ತುಸಂಗ್ರಹಾಲಯ ಹಾಗೂ ಪತ್ರಾಗಾರಗಳಿಗೆ ವಿದ್ಯಾರ್ಥಿಗಳನ್ನು ಕರೆದೊಯ್ದು ಪ್ರಾಚೀನ ವಸ್ತುಗಳು ಮತ್ತು ಐತಿಹಾಸಿಕ ದಾಖಲೆಗಳ ಸಂರಕ್ಷಣೆಯ ಕುರಿತು ಪ್ರಾಯೋಗಿಕ ಜ್ಞಾನ ನೀಡಲು ಯೋಜಿಸಲಾಗಿದೆ ಎಂದರು. ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಅಪ್ಪಣ್ಣ ಎನ್. ಹಂಜೆ ಅವರು ಇತಿಹಾಸ ಕ್ಲಬ್ ಸ್ಥಾಪಿಸಿ ಭಾಷಣ, ಪ್ರಬಂಧ ಹಾಗೂ ರಸಪ್ರಶ್ನೆ ಸ್ಪರ್ಧೆಗಳನ್ನು ಆಯೋಜಿಸುವಂತೆ ಸೂಚಿಸಿದರು. ರಾಷ್ಟ್ರೀಯ ಹಬ್ಬಗಳು, ಮಹಾಪುರುಷರ ಜಯಂತಿ ಹಾಗೂ ವಿಶ್ವ ಪರಂಪರೆ ದಿನವನ್ನು ಅರ್ಥಪೂರ್ಣವಾಗಿ ಆಚರಿಸುವ ಜತೆಗೆ ಹಳೆಯ ನಾಣ್ಯಗಳು, ಶಾಸನಗಳ ಪ್ರತಿಕೃತಿಗಳು ಮತ್ತು ಐತಿಹಾಸಿಕ ಚಿತ್ರಗಳ ಪ್ರದರ್ಶನ ಏರ್ಪಡಿಸುವಂತೆ ತಿಳಿಸಿದರು. ಕುಮಾರಿ ಬಸಮ್ಮ ಲೆಂಕಣ್ಣನವರ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಆರಂಭವಾಯಿತು. ಡಾ. ಲಕ್ಷ್ಮಣ ಮುಳಗುಂದ ಸ್ವಾಗತಿಸಿದರು. ಕುಮಾರಿ ಸಾವಿತ್ರಿ ಟಿ. ವಂದಿಸಿದರು. ಬಸವಂತಪ್ಪ ದೊಡ್ಡಮನಿ ಕಾರ್ಯಕ್ರಮ ನಿರೂಪಿಸಿದರು. ಕಾಲೇಜಿನ ಬೋಧಕರು ಹಾಗೂ ಇತಿಹಾಸ ವಿಭಾಗದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಬೆರಳಚ್ಚು, ಕಂಪ್ಯೂಟರ್ ಪರೀಕ್ಷೆಯಲ್ಲಿ ಶೇ.100 ಫಲಿತಾಂಶ

**ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿ, ಬೆಂಗಳೂರು ನಡೆಸಿದ 2026ರ ಜುಲೈ ತಿಂಗಳ ಬೆರಳಚ್ಚು (ಟೈಪಿಂಗ್) ಹಾಗೂ ಆಗಸ್ಟ್ ತಿಂಗಳ ಕಂಪ್ಯೂಟರ್ ಪರೀಕ್ಷೆಯಲ್ಲಿ ನಗರದ ಶ್ರೀ ವಿಜಯ ಮಹಾಂತೇಶ ವಿದ್ಯಾಲಯವು ಶೇ.100ರಷ್ಟು ಫಲಿತಾಂಶ ದಾಖಲಿಸಿದೆ. ಇಂಗ್ಲಿಷ್ ಬೆರಳಚ್ಚು ಸೀನಿಯರ್ ವಿಭಾಗದಲ್ಲಿ ಮಂಜುಳಾ ಕೆ. ಸಕ್ರಿ ಶೇ.94, ವೈಷ್ಣವಿ ವಿ. ರಾಯಬಾಗಿ ಹಾಗೂ ದಿಲಶಾಹನ ಯು. ಹಿರೇಹಾಳ ತಲಾ ಶೇ.93, ಬಸವರಾಜ ಹೆಚ್. ಹಡಗಲಿ ಶೇ.92, ಐಶ್ವರ್ಯ ಎಸ್. ಕಮ್ಮಾರ ಶೇ.90.50 ಸೇರಿದಂತೆ 13 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

ಇಂಗ್ಲಿಷ್ ಬೆರಳಚ್ಚು ಜೂನಿಯರ್ ವಿಭಾಗದಲ್ಲಿ ದುರಗಪ್ಪ ಬಿ. ಮಾದರ ಶೇ.93, ಅಕ್ಷತಾ ಬಿ. ಜೂಲಗಪ್ಪ ಶೇ.91.50, ತಹಸೀನಬಾನು ಎಂ. ತೋರಗಲ್ಲ ಶೇ.91 ಸೇರಿದಂತೆ 10 ವಿದ್ಯಾರ್ಥಿಗಳು ಸಾಧನೆ ಮಾಡಿದ್ದಾರೆ.

ಕನ್ನಡ ಬೆರಳಚ್ಚು ಸೀನಿಯರ್ ವಿಭಾಗದಲ್ಲಿ ಬಸವರಾಜ ಹೆಚ್. ಹಡಗಲಿ ಶೇ.90.50, ವೈಷ್ಣವಿ ವಿ. ರಾಯಬಾಗಿ ಶೇ.89.50 ಹಾಗೂ ದಿಲಶಾಹನ ಯು. ಹಿರೇಹಾಳ ಶೇ.88.50 ಪಡೆದು ಗಮನ ಸೆಳೆದಿದ್ದಾರೆ. ಜೂನಿಯರ್ ವಿಭಾಗದಲ್ಲಿ ಅಕ್ಷತಾ ಬಿ. ಜೂಲಗಪ್ಪ ಶೇ.92.50, ಐಶ್ವರ್ಯ ಆಡೀನ ಶೇ.91.50 ಹಾಗೂ ತಹಸೀನಬಾನು ಎಂ. ತೋರಗಲ್ಲ ಶೇ.91 ಫಲಿತಾಂಶ ದಾಖಲಿಸಿದ್ದಾರೆ. ಕಂಪ್ಯೂಟರ್ ಪರೀಕ್ಷೆಯಲ್ಲೂ ವಿದ್ಯಾಲಯ ಶೇ.100 ಫಲಿತಾಂಶ ಪಡೆದಿದ್ದು, ಸೌಮ್ಯ ಪಿ. ಬಿಳೇಕಲ್ಲ ಶೇ.87, ರಾಘವೇಂದ್ರ ತಳವಾರ ಶೇ.84.50, ಅಪರ್ಣಾ ದೇವಗಿರಿಕರ್ ಶೇ.84 ಹಾಗೂ ವಿನಾಯಕ ಕರಡಿ ಮತ್ತು ಅನೀಲ ಸಂಗನಾಳ ತಲಾ ಶೇ.82.50 ಅಂಕ ಗಳಿಸಿದ್ದಾರೆ. ಒಟ್ಟು 13 ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಪ್ರಾಚಾರ್ಯ ಶ್ರೀ ಮಹಾಂತೇಶ ಅರಳಿ ಅಭಿನಂದನೆ ಸಲ್ಲಿಸಿ, ಮುಂದಿನ ಶೈಕ್ಷಣಿಕ ಪ್ರಯತ್ನಗಳಿಗೂ ಶುಭ ಹಾರೈಸಿದ್ದಾರೆ.

## ತಾಲೂಕು ಮಟ್ಟದ ದಸರಾ ಕ್ರೀಡಾಕೂಟಕ್ಕೆ ನೋಂದಣಿ ಕಡ್ಡಾಯ

**ವಿಜಯಸಾಕ್ಷಿ ಸುದ್ದಿ, ಗದಗ**

2026–27ನೇ ಸಾಲಿನ ಗದಗ ಜಿಲ್ಲೆಯ ವಿವಿಧ ತಾಲೂಕು ಹಾಗೂ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಆಸಕ್ತ ಪುರುಷ ಹಾಗೂ ಮಹಿಳಾ ಕ್ರೀಡಾಪಟುಗಳು ಕಡ್ಡಾಯವಾಗಿ ಆನ್‌ಲೈನ್ ಮೂಲಕ ಹೆಸರು ನೋಂದಾಯಿಸಿಕೊಳ್ಳಬೇಕು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ತಿಳಿಸಿದೆ.

ಕ್ರೀಡಾಪಟುಗಳು ಮೂಲಕ ಕ್ಯೂಆರ್ ಕೋಡ್ ಬಳಸಿ ಹೆಸರು ನೋಂದಾಯಿಸಿ ಕ್ರೀಡಾಕೂಟದಲ್ಲಿ ಭಾಗವಹಿಸಬೇಕು. ಕ್ರೀಡಾಪಟುಗಳು ಕ್ರೀಡಾಕೂಟ ನಡೆಯುವ ಸ್ಥಳದಲ್ಲಿ ಬೆಳಗ್ಗೆ 9 ಗಂಟೆಗೆ ಹಾಜರಿರಬೇಕು.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕುಗಳ ದೈಹಿಕ ಶಿಕ್ಷಣ ಶಿಕ್ಷಕರು ಹಾಗೂ ಕ್ರೀಡಾ ತರಬೇತುದಾರರನ್ನು ಸಂಪರ್ಕಿಸಬಹುದು. ಗಜೇಂದ್ರಗಡಕ್ಕೆ ಲಕ್ಷ್ಮಣ ಬಾರಕೇರ (7975322259), ಬಸವರಾಜ ಹೊಸಳ್ಳಿ (8970838603), ಮಂಜುನಾಥ ಬಾಗಡೆ (9036533909); ಗದಗಕ್ಕೆ ಚಂದ್ರಶೇಖರ ಮೇಲಿನಮನಿ (8618320040), ವಿದ್ಯಾ ಕುಲಕರ್ಣಿ (8951936636); ನರಗುಂದಕ್ಕೆ ಎನ್.ಆರ್. ನಿಡಗುಂದಿ (9945256311), ಬಾಹುಬಲಿ (9964731179); ಮುಂಡರಗಿಗೆ ಎಂ.ವಿ. ಪಾಟೀಲ (9880249574), ವಿದ್ಯಾ ಕುಲಕರ್ಣಿ (8951936636); ರೋಣಕ್ಕೆ ಲಕ್ಷ್ಮಣ ಬಾರಕೇರ (7975322259), ಬಸವರಾಜ ಹೊಸಳ್ಳಿ (8970838603) ಅವರನ್ನು ಸಂಪರ್ಕಿಸಬಹುದು.

### 15 ದಿನಗಳ ಜೀವನ ದರ್ಶನ ಪ್ರವಚನಕ್ಕೆ ಮಂಗಲ

# ಬೂದೇಶ್ವರ ಅಜ್ಜನವರ ಬದುಕೇ ಆಧ್ಯಾತ್ಮದ ದಾರಿ

**ವಿಜಯಸಾಕ್ಷಿ ಸುದ್ದಿ, ಗದಗ**

ಶಿವಶರಣರ ಜೀವನ ಚರಿತ್ರೆ, ಪುರಾಣ ಹಾಗೂ ಪ್ರವಚನಗಳನ್ನು ಆಲಿಸುವುದರಿಂದ ಮನುಷ್ಯನ ಮನಸ್ಸಿಗೆ ಶಾಂತಿ, ನೆಮ್ಮದಿ ದೊರೆಯುತ್ತದೆ ಎಂದು ಹೊಸಳ್ಳಿ ಮಠದ ಮ.ನಿ.ಪ್ರ. ಜಗದ್ಗುರು ಅಭಿನವ ಬೂದೇಶ್ವರ ಸ್ವಾಮೀಜಿ ಹೇಳಿದರು.

ನಗರದ ಈಶ್ವರ ದೇವಸ್ಥಾನದಲ್ಲಿ ಈಶ್ವರ ಸೇವಾ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ 14ನೇ ವರ್ಷದ ಪ್ರವಚನ ಕಾರ್ಯಕ್ರಮದ ಅಂಗವಾಗಿ 15 ದಿನಗಳ ಕಾಲ ನಡೆದ 775 ವರ್ಷ ಬಾಳಿದ ಶ್ರೀ ಹೊಸಳ್ಳಿ ಬೂದೇಶ್ವರ ಅಜ್ಜನವರ ಜೀವನ ದರ್ಶನ ಪ್ರವಚನದ ಮಂಗಲ ಕಾರ್ಯಕ್ರಮ ಭಕ್ತಿಭಾವದಿಂದ ನಡೆಯಿತು.

ಅಭಿನವ ಬೂದೇಶ್ವರ ಸ್ವಾಮೀಜಿ ಅವರ ದಿವ್ಯ ಸಾನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಪೂಜ್ಯ ಡಾ. ನೀಲಮ್ಮ ತಾಯಿ ಹಾಗೂ ರಾಜಯೋಗಿನಿ ಬ್ರಹ್ಮಕುಮಾರಿ ಜಯಂತಿ ಅಕ್ಕನವರು ಸಾನಿಧ್ಯ ವಹಿಸಿದ್ದರು. ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹಾಗೂ 29ನೇ ವಾರ್ಡ್ ಸದಸ್ಯ ಎಲ್.ಡಿ. ಚಂದಾವರಿ ಮುಖ್ಯ ಅತಿಥಿಗಳಾಗಿ



ಪಾಲ್ಗೊಂಡಿದ್ದರು.

ಆಶೀರ್ವಚನ ನೀಡಿದ ಅಭಿನವ ಬೂದೇಶ್ವರ ಸ್ವಾಮೀಜಿ, ಶಿವಶರಣರ ಜೀವನ ಸಂದೇಶವನ್ನು ತಿಳಿದುಕೊಂಡು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಇಂತಹ ಧಾರ್ಮಿಕ ಕಾರ್ಯಕ್ರಮಗಳು ಸಮಾಜದಲ್ಲಿ ಆಧ್ಯಾತ್ಮಿಕ ಚಿಂತನೆ, ಶಾಂತಿ ಹಾಗೂ ಉತ್ತಮ ಜೀವನ ಮೌಲ್ಯಗಳನ್ನು ಬೆಳೆಸುತ್ತವೆ ಎಂದರು. ದೇವಸ್ಥಾನದ ಆವರಣದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾರ್ಯಗಳನ್ನು ಶ್ಲಾಘಿಸಿದ ಅವರು, ಉದ್ಯಾನವನದಲ್ಲಿ ಶ್ರೀ ಪುಟ್ಟ ರಾಜ ಗವಾಯಿಗಳ ಪುತ್ಥಳಿ ಹಾಗೂ ದೇವಸ್ಥಾನದ ಸಮೀಪ ಯಾತ್ರಾ ನಿವಾಸ ನಿರ್ಮಾಣದ ಸಂಕಲ್ಪ ಯಶಸ್ವಿಯಾಗಲಿ ಎಂದು ಆಶೀರ್ವದಿಸಿದರು. ನಿವೃತ್ತ ನೌಕರರು ತಮ್ಮ ಮುಂದಿನ ಜೀವನವನ್ನು ಆಧ್ಯಾತ್ಮಿಕ ಚಿಂತನೆ ಹಾಗೂ ಶಿವನಾಮ ಸ್ಮರಣೆಯಲ್ಲಿ ಕಳೆಯಬೇಕು ಎಂದು ಕರೆ ನೀಡಿದರು. ಈಶ್ವರ ಸೇವಾ ಟ್ರಸ್ಟ್ ಅಧ್ಯಕ್ಷ ಮಲ್ಲಿಕಾರ್ಜುನ ಸಂತೋಜಿ ಮಾತನಾಡಿ, ಐದು ವಾರ್ಡ್‌ಗಳ ಜನರನ್ನು ಒಗ್ಗೂಡಿಸಿ ಧರ್ಮ, ಸಂಸ್ಕೃತಿ, ಸ್ವಚ್ಛತೆ ಹಾಗೂ ಉತ್ತಮ ಜೀವನಶೈಲಿ ಕುರಿತು ಜಾಗೃತಿ ಮೂಡಿಸುವ ಉದ್ದೇಶ ಹೊಂದಲಾಗಿದೆ. ವಿಶೇಷವಾಗಿ ಯುವಕ–ಯುವತಿಯರನ್ನು ಆಧ್ಯಾತ್ಮಿಕ ಹಾಗೂ ಸಾಮಾಜಿಕ ಚಟುವಟಿಕೆಗಳಲ್ಲಿ ತೊಡಗಿಸಿ ವ್ಯಸನಮುಕ್ತ ಸಮಾಜ ನಿರ್ಮಿಸಲು ಎಲ್ಲರೂ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಎಲ್.ಡಿ. ಚಂದಾವರಿ ಅವರು 15 ದಿನಗಳ ಪ್ರವಚನದಲ್ಲಿ ಭಾಗವಹಿಸಿರುವುದು ಸಂತಸ ತಂದಿದೆ ಎಂದರು. ಡಾ. ನೀಲಮ್ಮ ತಾಯಿ ಹಾಗೂ ಬ್ರಹ್ಮಕುಮಾರಿ ಜಯಂತಿ ಅಕ್ಕನವರು ಮಾತನಾಡಿದರು.

ಕಾರ್ಯಕ್ರಮಕ್ಕೂ ಮುನ್ನ ಭಜನಾ ಮಂಡಳಿಯಿಂದ ಭಕ್ತಿಭಾವದ ಮೆರವಣಿಗೆ

> ಪುರಾಣ, ಪ್ರವಚನ ಹಾಗೂ ಶಿವಶರಣರ ಜೀವನ ಚರಿತ್ರೆಯನ್ನು ಆಲಿಸುವುದರಿಂದ ಆತ್ಮಕ್ಕೆ ಶಾಂತಿ ಮತ್ತು ನೆಮ್ಮದಿ ದೊರೆಯುತ್ತದೆ. ಶಿವಶರಣರು ತಮ್ಮ ಕಾಲದಲ್ಲಿ ಜನರಿಗೆ ಹುಚ್ಚರಂತೆ ಕಂಡರೂ, ವಾಸ್ತವದಲ್ಲಿ ಜಗತ್ತಿನ ಜನರ ಹುಚ್ಚನ್ನು ಬಿಡಿಸುವ ಮಹಾತ್ಮರಾಗಿದ್ದರು.
>
> –ಅಭಿನವ ಬೂದೇಶ್ವರ ಸ್ವಾಮೀಜಿ

ನಡೆಯಿತು. ಕುಂಭಮೇಳದೊಂದಿಗೆ ಶ್ರೀ ಬೂದೇಶ್ವರ ಅಜ್ಜನವರ ಮೂರ್ತಿಯನ್ನು ದೇವಸ್ಥಾನಕ್ಕೆ ಕರೆತರಲಾಯಿತು. ವಿವಿಧ ಧಾರ್ಮಿಕ–ಸಾಮಾಜಿಕ ಕಾರ್ಯಗಳಿಗೆ ಸಹಕರಿಸಿದ ದಾನಿಗಳು ಹಾಗೂ ನಿವೃತ್ತ ನೌಕರರನ್ನು ಸನ್ಮಾನಿಸಲಾಯಿತು. ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಬಳಿಕ ಭಕ್ತರಿಗೆ ಪ್ರಸಾದ ವಿತರಿಸಲಾಯಿತು.

## ವಿಜೃಂಭಣೆಯಿಂದ ವೀರಭದ್ರೇಶ್ವರ ಜಯಂತಿ ಆಚರಣೆ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ರಾಮನಗರ–ಹಗರಿಬೊಮ್ಮನಹಳ್ಳಿ ರಸ್ತೆಯಲ್ಲಿರುವ ಶ್ರೀ ಶೈಲ ಭ್ರಮರಾಂಬ ಶ್ರೀ ಮಲ್ಲಿಕಾರ್ಜುನ ದೇವಸ್ಥಾನದಲ್ಲಿ ಶ್ರೀ ವೀರಭದ್ರೇಶ್ವರ ಅವತಾರ ಜಯಂತಿಯನ್ನು ಭಕ್ತಿಭಾವ ಹಾಗೂ ವಿಜೃಂಭಣೆಯಿಂದ ಆಚರಿಸಲಾಯಿತು.

ಜಯಂತಿ ಅಂಗವಾಗಿ ದೇವಸ್ಥಾನದಲ್ಲಿ ವಿಶೇಷ ಪೂಜೆ, ಧಾರ್ಮಿಕ ವಿಧಿವಿಧಾನಗಳು ನೆರವೇರಿದವು. ನೂರಾರು ಭಕ್ತರು ಪಾಲ್ಗೊಂಡು ಶ್ರೀ ವೀರಭದ್ರೇಶ್ವರ ಸ್ವಾಮಿಯ ದರ್ಶನ ಪಡೆದು, ಪೂಜೆ ಸಲ್ಲಿಸಿ ಪ್ರಸಾದ ಸ್ವೀಕರಿಸಿದರು.

ಮರಿಯಮ್ಮನಹಳ್ಳಿಯ ಗುರುಪಾದ ದೇವರಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿದ್ದರು.

ಹೊಸಪೇಟೆಯ ಶ್ರೀ ಕೊಟ್ಟೂರುಸ್ವಾಮಿ ಸಂಸ್ಥಾನ ಮಠದ ಬಸವಲಿಂಗ ಮಹಾಸ್ವಾಮಿಗಳು ಸೇರಿದಂತೆ ಹಲವು ಪೂಜ್ಯರು ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಶಾಸಕ ಕೆ. ನೇಮಿರಾಜ್ ನಾಯ್ಕ ಅವರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಶ್ರೀ ವೀರಭದ್ರೇಶ್ವರ ಸ್ವಾಮಿಯ ದರ್ಶನ ಪಡೆದರು. ಧಾರ್ಮಿಕ ಆಚರಣೆಗಳು ಸಂಸ್ಕೃತಿ, ಪರಂಪರೆ ಹಾಗೂ ಸಾಮಾಜಿಕ ಐಕ್ಯತೆಯನ್ನು ಬಲಪಡಿಸುತ್ತವೆ ಎಂದು ಅಭಿಪ್ರಾಯಪಟ್ಟರು.

ವಲ್ಲಭಾಪುರದ ಓದಿಸೋ ಹಿರೇಮಠದ ಸುಭಾಸ್ ಚಂದ್ರಯ್ಯ ಶಾಸ್ತ್ರಿಗಳು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ವಿವಿಧ ಮಠಗಳ ಪೂಜ್ಯರು, ಪುರಸಭೆ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರು, ಪೊಲೀಸ್ ಅಧಿಕಾರಿಗಳು, ವಿವಿಧ ಸಂಘಟನೆಗಳ ಮುಖಂಡರು, ಪತ್ರಕರ್ತರು ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು. ಕಾರ್ಯಕ್ರಮವನ್ನು ಶ್ರೀ ಕರಿಬಸವನಗೌಡ್ರು ಬ್ಯಾಲಾಳು ನಿರೂಪಿಸಿದರು.

## ಧರ್ಮಕ್ಕೆ ಕುತ್ತು ಬಂದಾಗ ವೀರಭದ್ರನ ರುದ್ರಾವತಾರ!



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ದುಷ್ಟರ ಅಟ್ಟಹಾಸ ಹೆಚ್ಚಾಗಿ ಧರ್ಮಕ್ಕೆ ಅಪಾಯ ಎದುರಾದಾಗ ಧರ್ಮರಕ್ಷಣೆಗಾಗಿ ವೀರಭದ್ರೇಶ್ವರ ದೇವರು ರುದ್ರರೂಪದಲ್ಲಿ ಅವತರಿಸಿದನು ಎಂದು ಧಾರ್ಮಿಕ ಚಿಂತಕ ವೀರಣ್ಣ ಪವಾಡದ ಹೇಳಿದರು.

ಪಟ್ಟಣದ ಹಳೇ ಬಸ್ ನಿಲ್ದಾಣದ ಬಳಿಯ ವೀರಭದ್ರೇಶ್ವರ ದೇವಸ್ಥಾನದಲ್ಲಿ ಮಂಗಳವಾರ ವೀರಭದ್ರೇಶ್ವರ ಜಯಂತಿ ಅಂಗವಾಗಿ ಗುರು–ಹಿರಿಯರು ಹಾಗೂ ಭಕ್ತರ ಸಮ್ಮುಖದಲ್ಲಿ ವಿಶೇಷ ಪೂಜೆ ಮತ್ತು ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು.

ಈ ಸಂದರ್ಭದಲ್ಲಿ ಮಾತನಾಡಿದ ವೀರಣ್ಣ ಪವಾಡದ, ವೀರಭದ್ರೇಶ್ವರ ಎಲ್ಲರ ಶ್ರದ್ಧೆಯ ದೇವರಾಗಿದ್ದು, ಆತನ ಪವಾಡಗಳು ಹಾಗೂ ವೈಶಿಷ್ಟ್ಯಗಳನ್ನು ಅಧ್ಯಯನ ಮಾಡಿ ತಿಳಿದುಕೊಳ್ಳಬೇಕು.

> ವೀರಭದ್ರೇಶ್ವರ ಯಾವುದೇ ಒಂದು ಜಾತಿಗೆ ಸೀಮಿತನಲ್ಲ; ಹಲವು ಸಮುದಾಯಗಳ ಕುಲದೈವವಾಗಿ ಆರಾಧಿಸಲ್ಪಡುವ ವಿಶಾಲ ಮನೋಭಾವದ ಪ್ರತೀಕ.
>
> – ವೀರಣ್ಣ ಪವಾಡದ, ಧಾರ್ಮಿಕ ಚಿಂತಕ

ಶಿವಸಿದ್ಧಾಂತದ ಮೂಲಕ ಜನಕಲ್ಯಾಣದ ಆಶಯಗಳನ್ನು ಸಾರಿದ ವೀರಭದ್ರ ದೇವರು ವಿಶಾಲ ಮನೋಭಾವದ ಪ್ರತೀಕವಾಗಿದ್ದಾನೆ. ಯಾವುದೇ ಒಂದು ಜಾತಿಗೆ ಸೀಮಿತವಾಗದೆ ಹಲವು ಸಮುದಾಯಗಳ ಕುಲದೈವವಾಗಿ ಆರಾಧಿಸಲ್ಪಡುತ್ತಿರುವುದು ಆತನ ವಿಶೇಷತೆ ಎಂದರು.ಅರ್ಚಕ ನಿತ್ಯಾನಂದ ವೀರೇಶಮಠ, ಎನ್.ಐ. ಬೆಲ್ಲದ, ಚನ್ನಪ್ಪ ಕೋಲಕಾರ, ರಾಜು ಬೋಳಶೆಟ್ಟರ, ಅಜ್ಜಪ್ಪ ಕುಂಬಿ ಸೇರಿದಂತೆ ಭಕ್ತರು ಉಪಸ್ಥಿತರಿದ್ದರು.

## ಸಂವಿಧಾನದ ಆಶಯ ಸಾರಿದ ಪ್ರಜಾಪ್ರಭುತ್ವ ಜಾಥಾ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಪಟ್ಟಣದಲ್ಲಿ ಮಂಗಳವಾರ ಸಂವಿಧಾನದ ಮಹತ್ವ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಸಾರುವ ಜಾಥಾ ನಡೆಯಿತು.

ಶ್ರೀ ಹಗರಿ ಆಂಜನೇಯ ದೇವಸ್ಥಾನದಿಂದ ಬೆಳಿಗ್ಗೆ 8ಕ್ಕೆ ಆರಂಭವಾದ ಜಾಥಾವು ಬಸವೇಶ್ವರ ಬಜಾರ್ ಮೂಲಕ ಸಾಗಿ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಲ್ ತಲುಪಿತು. ಶಾಸಕ ಕೆ. ನೇಮಿರಾಜ್ ನಾಯ್ಕ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ತಾಲ್ಲೂಕಿನ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ವಿವಿಧ ದಲಿತ ಸಂಘಟನೆಗಳ ಮುಖಂಡರು, ಕಾರ್ಯಕರ್ತರು ಪಾಲ್ಗೊಂಡರು.

ಅಂಬೇಡ್ಕರ್ ಸರ್ಕಲ್‌ನಲ್ಲಿ ಸಂವಿಧಾನದ ಪೀಠಿಕೆಯನ್ನು ಸಾಮೂಹಿಕವಾಗಿ



ವಾಚಿಸಿ, ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಸಹೋದರತ್ವದ ಮೌಲ್ಯಗಳನ್ನು ಕಾಪಾಡುವ ಸಂಕಲ್ಪ ಕೈಗೊಳ್ಳಲಾಯಿತು. ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಸಾಮಾಜಿಕ ನ್ಯಾಯ ಮತ್ತು ಸಮಾನತೆಯ ಚಿಂತನೆಗಳನ್ನು ಸ್ಮರಿಸಲಾಯಿತು.

ಜಾಥಾ ಬಳಿಕ ತಾಲ್ಲೂಕಿನ ವಿವಿಧ ಸರ್ಕಾರಿ ಕಚೇರಿಗಳಲ್ಲಿಯೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಗೌರವ ಸಲ್ಲಿಸಿ ಸಂವಿಧಾನದ ಪೀಠಿಕೆ ವಾಚಿಸಲಾಯಿತು.

"ಸಂವಿಧಾನ ನಮ್ಮ ಹೆಮ್ಮೆ – ಪ್ರಜಾಪ್ರಭುತ್ವ ನಮ್ಮ ಶಕ್ತಿ" ಎಂಬ ಸಂದೇಶದೊಂದಿಗೆ ಕಾರ್ಯಕ್ರಮ ಅರ್ಥಪೂರ್ಣವಾಗಿ ನಡೆಯಿತು.

## ಪ್ರಜಾಪ್ರಭುತ್ವ ದಿನ: ಆನ್‌ಲೈನ್ ರಸಪ್ರಶ್ನೆ

**ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಮಹಾವಿದ್ಯಾಲಯದಲ್ಲಿ ಆನ್‌ಲೈನ್ ರಸಪ್ರಶ್ನೆ (E-Quiz) ಕಾರ್ಯಕ್ರಮ ಆಯೋಜಿಸಲಾಗಿದೆ. ಕಾಲೇಜಿನ ಆಂತರಿಕ ಗುಣಮಟ್ಟ ಭರವಸಾ ಕೋಶದ ಅಡಿಯಲ್ಲಿ ರಾಜ್ಯಶಾಸ್ತ್ರ ವಿಭಾಗ ಹಾಗೂ ಚುನಾವಣಾ ಸಾಕ್ಷರತಾ ಸಮಿತಿ ವತಿಯಿಂದ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸಮಿತಿಯ ಸಂಚಾಲಕಿ ರಾಜ್ಮಾ ಟಿ.ಎಂ.ಆರ್. ಅವರು ಕಾರ್ಯಕ್ರಮ ಆಯೋಜಿಸಿದ್ದಾರೆ. ಸೆಪ್ಟೆಂಬರ್ 15ರಿಂದ 21ರವರೆಗೆ ನಡೆಯುವ ಇ–ಕ್ವಿಜ್‌ನಲ್ಲಿ ಸಾರ್ವಜನಿಕರು ಗೂಗಲ್ ಫಾರ್ಮ್ ಲಿಂಕ್ ಅಥವಾ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡುವ ಮೂಲಕ ಭಾಗವಹಿಸಬಹುದು. ಸ್ಪರ್ಧೆಯಲ್ಲಿ ಪಾಲ್ಗೊಂಡವರಿಗೆ ಇ–ಪ್ರಮಾಣಪತ್ರ ನೀಡಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಹಾಗೂ ಚುನಾವಣಾ ಸಾಕ್ಷರತೆಯನ್ನು ಹೆಚ್ಚಿಸುವ ಉದ್ದೇಶದಿಂದ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಡಾ. ಗಣಪತಿ ಕೆ. ಲಮಾಣಿ ಮನವಿ ಮಾಡಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಸಂಚಾಲಕಿ ರಾಜ್ಮಾ ಟಿ.ಎಂ.ಆರ್. ಅವರನ್ನು 9986747598 ಸಂಪರ್ಕಿಸಬಹುದು.

ಆನ್‌ಲೈನ್ ರಸಪ್ರಶ್ನೆ: "Google Form - E-Quiz" (https://forms.gle/QVNg-W22iX5uERVLE)

# ಗದಗ ಕಾ ರಾಜಾ ದರ್ಬಾರಿನಲ್ಲಿ ಮೊಳಗಿದ 'ಏಳುಕೋಟಿ' ಜಯಘೋಷ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ನಾಲ್ವಾಡದವರ ಓಣಿಯ ಗದಗ ಕಾ ರಾಜಾ ಶ್ರೀ ಗಜಾನನೋತ್ಸವ ಸಮಿತಿಯ 50ನೇ ವರ್ಷದ ಸಂಭ್ರಮಕ್ಕೆ ಗೊರವರ ಭಕ್ತಿಯ ಆಗಮನ ದೈವಿಕ ಸ್ಪರ್ಶ ನೀಡಿತು.

2026ನೇ ಸಾಲಿನ ಗಣೇಶೋತ್ಸವದ ಅಂಗವಾಗಿ 50ನೇ ವರ್ಷದ ಶ್ರೀ ವಿಘ್ನೇಶ್ವರ ಪ್ರತಿಷ್ಠಾಪನಾ ಮಹೋತ್ಸವವನ್ನು ವಿಜೃಂಭಣೆಯಿಂದ ಆಚರಿಸುತ್ತಿರುವ ಸಮಿತಿ, ಈ ಬಾರಿ ವಿಶೇಷವಾಗಿ ಶ್ರೀ ಮೈಲಾರಲಿಂಗೇಶ್ವರ ರೂಪಕವನ್ನು ಸಿದ್ಧಪಡಿಸಿದೆ. ಮಣಿ–ಮಲ್ಲಾಸುರರ ಸಂಹಾರಕ್ಕಾಗಿ ಪರಶಿವನು ಮಾರ್ತಾಂಡ ಭೈರವನಾಗಿ, ಪಾರ್ವತಿ ದೇವಿಯು ಗಂಗೆ ಮಾಳವ್ವಳಾಗಿ ಭೂಲೋಕಕ್ಕೆ ಅವತರಿಸಿ ದುಷ್ಟರ ಸಂಹಾರ ಮಾಡಿದ ಪೌರಾಣಿಕ ಕಥಾಹಂದರವನ್ನು ರೂಪಕದಲ್ಲಿ ಕಟ್ಟಿಕೊಡಲಾಗಿದೆ.

ಈ ದಿವ್ಯ ರೂಪಕದ ಪ್ರದರ್ಶನಕ್ಕೆ ಗದಗ ಕಾ ರಾಜಾ ಮಂಡಳಿಯ ಬಿನ್ನಹದ ಮೇರೆಗೆ ನಗರದ ಐತಿಹಾಸಿಕ



ವೀರನಾರಾಯಣ ದೇವಸ್ಥಾನದ ಎದುರಿನ ಮೈಲಾರಲಿಂಗೇಶ್ವರ ದೇವಸ್ಥಾನದಿಂದ 35ಕ್ಕೂ ಹೆಚ್ಚು ಗೊರವರು ಸೋಮವಾರ ನಾಲ್ವಾಡ ಓಣಿಗೆ ಆಗಮಿಸಿದರು.

ಕಪ್ಪು ಕಂಬಳಿ, ಕವಡೆ ಹಾರ, ಗೆಜ್ಜೆ, ಡಮರುಗ ಹಾಗೂ ಸಾಂಪ್ರದಾಯಿಕ ಪೇಟ ಧರಿಸಿ, ಹಣೆಗೆ ಭಂಡಾರದ ತಿಲಕವಿಟ್ಟು ಆಗಮಿಸಿದ ಗೊರವರ ತಂಡ, ಗಣೇಶೋತ್ಸವದ ಮಂಟಪದ ಎದುರು "ಏಳುಕೋಟಿ... ಏಳುಕೋಟಿ... ಜೈ ಮಲ್ಲಾರ" ಎಂಬ ಜಯಘೋಷ ಮೊಳಗಿಸಿತು.

ಡಮರುಗದ ನಾದ, ದಿವಟಿಗೆಯ ಬೆಳಕಿನ ನಡುವೆ ಸಾಂಪ್ರದಾಯಿಕ ಕುಣಿತ, ಆರಾಧನೆ, ವಿಶೇಷ ಪೂಜೆ ಹಾಗೂ ನೈವೇದ್ಯ ಸಮರ್ಪಿಸಿ ಶ್ರೀ ಮಲ್ಲಾರಲಿಂಗೇಶ್ವರ ರೂಪಕದ ದೃಶ್ಯಾವಳಿ ಪ್ರದರ್ಶನಕ್ಕೆ ವಿಧ್ಯುಕ್ತ ಚಾಲನೆ ನೀಡಲಾಯಿತು.


ಗೊರವರ ಕಣ್ಣಲ್ಲಿ ಭಕ್ತಿ, ಹೆಜ್ಜೆಯಲ್ಲಿ ಶಕ್ತಿ, ದನಿಯಲ್ಲಿ ಪರಮ ನಿಷ್ಠೆ. ಅವರ ಜಯಘೋಷಕ್ಕೆ ನೆರೆದಿದ್ದ ನೂರಾರು ಭಕ್ತರು ಭಕ್ತಿಪರವಶರಾದರು. ಭಕ್ತರಿಗೆ ಭಂಡಾರದ ತಿಲಕವಿಟ್ಟು ಗೊರವರು ಶುಭ ಹಾರೈಸಿದರು. ಇಡೀ ನಾಲ್ವಾಡ ಓಣಿ ಮೈಲಾರನ ಜಯಘೋಷದಿಂದ ಮಾರ್ದನಿಸಿತು.

ನಾಲ್ವಾಡ ಓಣಿಯ ಗುರುಹಿರಿಯರ ಮಾರ್ಗದರ್ಶನದಲ್ಲಿ ಕ್ರಿಯಾಶೀಲ ಯುವಕರ ತಂಡ ಕಳೆದ ಒಂದು ತಿಂಗಳಿಂದ ಹಗಲಿರುಳು ಶ್ರಮಿಸಿ ದೃಶ್ಯಾವಳಿಯನ್ನು ಸಿದ್ಧಪಡಿಸಿದ್ದು, 50ನೇ ವರ್ಷದ ಗಣೇಶೋತ್ಸವದ ಪ್ರಮುಖ ಆಕರ್ಷಣೆಯಾಗಿ ರೂಪುಗೊಂಡಿದೆ.

## ಸಣ್ಣ ಸುದ್ದಿಗಳು

### ನಿಧನ

**ಸುರೇಶಪ್ಪ ರಾಚನಾಯ್ಕರ**



**ಲಕ್ಷ್ಮೇಶ್ವರ:** ಪಟ್ಟಣದ ಸೋಮೇಶ್ವರ ತೇರಿನ ಮನೆಯ ಹತ್ತಿರದ ನಿವಾಸಿ, ನಿವೃತ್ತ ಕೃಷಿ ಇಲಾಖೆ ನೌಕರ, ಸೋಮೇಶ್ವರ ಭಕ್ತರ ಟ್ರಸ್ಟ್‌ನ ಉಪಾಧ್ಯಕ್ಷ ಹಾಗೂ ಪಂಚಮಸಾಲಿ ಕೋ-ಆಪರೇಟಿವ್ ಸೊಸೈಟಿ ನಿರ್ದೇಶಕರಾಗಿದ್ದ ಸುರೇಶಪ್ಪ ಎಂ. ರಾಚನಾಯ್ಕರ (78) ಅವರು ಬುಧವಾರ ನಿಧನರಾದರು. ಮೃತರಿಗೆ ಪತ್ನಿ, ಮೂವರು ಪುತ್ರರು ಸೇ-ರಿದಂತೆ ಅಪಾರ ಬಂಧು-ಬಳಗವಿದೆ.

## ಅತಿಥಿ ಉಪನ್ಯಾಸಕರ ಸಂಘಟನೆಗೆ ಅಧ್ಯಕ್ಷರಾಗಿ ಬಸವರಾಜ ಕರುಗಲ್ ಆಯ್ಕೆ

ವಿಜಯಸಾಕ್ಷಿ ಸುದ್ದಿ, ಕೊಪ್ಪಳ







ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಅತಿಥಿ ಉಪನ್ಯಾಸಕರ ಸಂಘಟನೆಗೆ ಮಂಗಳವಾರ ನೂತನ ಪದಾಧಿಕಾರಿಗಳನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ಅಧ್ಯಕ್ಷರಾಗಿ ಪತ್ರಿಕೋದ್ಯಮ ವಿಭಾಗದ ಬಸವರಾಜ ಕರುಗಲ್, ಉಪಾಧ್ಯಕ್ಷರಾಗಿ ವಾಣಿಜ್ಯ ವಿಭಾಗದ ರಿಯಾಜ್ ಪರ್ವಿನ್, ಪ್ರಧಾನ ಕಾರ್ಯದರ್ಶಿಯಾಗಿ ಕನ್ನಡ ವಿಭಾಗದ ಬಸವರಾಜ ಡಿ., ಸಂಘಟನಾ ಕಾರ್ಯದರ್ಶಿಯಾಗಿ ಇತಿಹಾಸ ವಿಭಾಗದ ಡಾ. ಪ್ರಕಾಶ್ ಎಂ. ಹಾಗೂ ಖಜಾಂಚಿಯಾಗಿ ಕನ್ನಡ ವಿಭಾಗದ ಡಾ. ನಾಗರಾಜ ದೊರೆ ಅವಿರೋಧವಾಗಿ ಆಯ್ಕೆಯಾದರು.

ಈ ಸಂದರ್ಭದಲ್ಲಿ ನೂತನ ಅಧ್ಯಕ್ಷ ಬಸವರಾಜ ಕರುಗಲ್ ಮಾತನಾಡಿ, ಅತಿಥಿ ಉಪನ್ಯಾಸಕರ ಬೇಡಿಕೆಗಳ ಈಡೇರಿಕೆ ಹಾಗೂ ಹಕ್ಕುಗಳ ರಕ್ಷಣೆಗೆ ಸಂಘಟನೆ ಅಗತ್ಯವಾಗಿದೆ.

ಸಂಘಟನೆಯು ಅತಿಥಿ ಉಪನ್ಯಾಸಕರ ಹಿತಾಸಕ್ತಿಯನ್ನು ಕಾಪಾಡಲು ಬದ್ಧವಾಗಿದ್ದು, ವೈಯಕ್ತಿಕ ಹಿತಾಸಕ್ತಿಗಳಿಗೆ ಅವಕಾಶವಿಲ್ಲ ಎಂದು ತಿಳಿಸಿದರು.

### 59 ತಿಂಗಳು ಅಭಿವೃದ್ಧಿಗೆ ಮೀಸಲು: ಬಸವರಾಜ ಬೊಮ್ಮಾಯಿ

# ಚುನಾವಣೆಗಿಂತ ಜನಸೇವೆ ಮುಖ್ಯ



> ರಾಜಕೀಯ ಮತ್ತು ಚುನಾವಣೆ 60 ತಿಂಗಳಲ್ಲಿ ಒಂದು ತಿಂಗಳು ಮಾತ್ರ ಇರಬೇಕು. ಉಳಿದ 59 ತಿಂಗಳು ಜನಪರ ಅಭಿವೃದ್ಧಿ ಕಾರ್ಯಗಳು ನಿರಂತರವಾಗಿ ನಡೆಯಬೇಕು.
> – ಬಸವರಾಜ ಬೊಮ್ಮಾಯಿ

ವಿಜಯಸಾಕ್ಷಿ ಸುದ್ದಿ, ಹಾವೇರಿ

ರಾಜಕೀಯ ಮತ್ತು ಚುನಾವಣೆ ಐದು ವರ್ಷಗಳ ಅವಧಿಯಲ್ಲಿ ಒಂದು ತಿಂಗಳಿಗೆ ಮಾತ್ರ ಸೀಮಿತವಾಗಬೇಕು. ಉಳಿದ 59 ತಿಂಗಳು ಜನಪರ ಅಭಿವೃದ್ಧಿ ಕಾರ್ಯಗಳು ನಿರಂತರವಾಗಿ ನಡೆಯಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಹಾನಗಲ್ ತಾಲೂಕಿನ ಮಾರನಬೀಡ ಗ್ರಾಮದಲ್ಲಿ ನೂತನ ಆಯುಷ್ಮಾನ್ ಆರೋಗ್ಯ ಕೇಂದ್ರ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮದಲ್ಲಿ ಆರೋಗ್ಯ ಕೇಂದ್ರ ಆರಂಭವಾಗಿರುವುದು ಸಂತಸದ ಸಂಗತಿ. ಸುತ್ತಮುತ್ತಲಿನ ಗ್ರಾಮಗಳ ಜನರೂ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಆರೋಗ್ಯ ಕೇಂದ್ರದ ಮೇಲಂತಸ್ತಿನಲ್ಲಿ ಆರೋಗ್ಯ ಅಧಿಕಾರಿಯ ವಾಸಕ್ಕೆ ವ್ಯವಸ್ಥೆ ಹಾಗೂ ಕೆಳಭಾಗದಲ್ಲಿ ಆಸ್ಪತ್ರೆ ಮತ್ತು ಪರೀಕ್ಷಾ ಪ್ರಯೋಗಾಲಯದ ಸೌಲಭ್ಯ ಕಲ್ಪಿಸಲಾಗಿದೆ. ಪ್ರತಿಯೊಬ್ಬರೂ ಆರೋಗ್ಯದ ಬಗ್ಗೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಸಲಹೆ ನೀಡಿದರು.

**ಧೂಮಪಾನದಿಂದ ದೂರವಿರಿ**

ತಂಬಾಕು ಹಾಗೂ ಸಿಗರೇಟ್ ಸೇವನೆಯಿಂದ ಕ್ಯಾನ್ಸರ್, ಹೃದಯ ಸಂಬಂಧಿ ಕಾಯಿಲೆಗಳು ಸೇರಿದಂತೆ ಹಲವು ಗಂಭೀರ ಆರೋಗ್ಯ ಸಮಸ್ಯೆಗಳು ಎದುರಾಗುತ್ತವೆ. ಹೀಗಾಗಿ ಧೂಮಪಾನ ಸಂಪೂರ್ಣವಾಗಿ ತ್ಯಜಿಸಬೇಕು ಎಂದು ಕರೆ ನೀಡಿದರು. ಆಯುಷ್ಮಾನ್ ಭಾರತ್ ಯೋಜನೆಯಡಿ ಬಡವರಿಗೆ ಉಚಿತ ವೈದ್ಯಕೀಯ ಚಿಕಿತ್ಸೆಗಾಗಿ ₹5 ಲಕ್ಷದವರೆಗೆ ನೆರವು ದೊರೆಯುತ್ತಿದೆ. ರಾಜ್ಯದಲ್ಲಿ ಸುಮಾರು ಎರಡು ಕೋಟಿ ಆಯುಷ್ಮಾನ್ ಕಾರ್ಡ್‌ಗಳಿದ್ದು, 90 ಲಕ್ಷಕ್ಕೂ ಅಧಿಕ ಜನರು ಈಗಾಗಲೇ ಸೌಲಭ್ಯ ಪಡೆದಿದ್ದಾರೆ ಎಂದರು.

ಹಾನಗಲ್ ಸೇರಿದಂತೆ ಜಿಲ್ಲೆಯಾದ್ಯಂತ ಪ್ರತಿ ತಾಲೂಕಿಗೆ 7-8ರಂತೆ ಹೊಸ ಆರೋಗ್ಯ ಕೇಂದ್ರಗಳನ್ನು ನಿರ್ಮಿಸಲಾಗುತ್ತಿದೆ. ಕೇಂದ್ರಗಳು ಪರಿಣಾಮಕಾ-ರಿಯಾಗಿ ಕಾರ್ಯನಿರ್ವಹಿಸಲು ವೈದ್ಯರು, ಆರೋಗ್ಯ ಅಧಿಕಾರಿಗಳು, ಪ್ರಯೋಗಾಲಯ ಸಿಬ್ಬಂದಿ ಹಾಗೂ ನರ್ಸ್‌ಗಳ ವ್ಯವಸ್ಥೆ ಅಗತ್ಯ ಎಂದು ಹೇಳಿದರು.

ಮಠದ ಊಟದ ಮನೆ ನಿರ್ಮಾಣ-ಕ್ಕೆ ಈಗಾಗಲೇ ₹10 ಲಕ್ಷ ನೀಡಿದ್ದು, ಮುಂದಿನ ದಿನಗಳಲ್ಲಿ ಹಂತ ಹಂತವಾಗಿ ಇನ್ನೂ ₹20 ಲಕ್ಷ ನೀಡುವುದಾಗಿ ಭರವಸೆ ನೀಡಿದರು.

ಶಾಸಕ ಶ್ರೀನಿವಾಸ ಮಾನೆ, ಮಾಜಿ ಶಾಸಕ ಶಿವರಾಜ ಸಜ್ಜನ ಸೇರಿದಂತೆ ಹಲವು ಮುಖಂಡರು, ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ಪ್ರಮುಖರು ಉಪಸ್ಥಿತರಿದ್ದರು.

## ವಿಜ್ಞಾನ ಶಿಕ್ಷಕಿಗೆ ‘ಗುರುಕುಲ ಗುರು ರತ್ನ’



ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿದ ಸೇವೆ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ನೀಡಿದ ಕೊಡುಗೆ ಪರಿಗಣಿಸಿ, 2026-27ನೇ ಸಾಲಿನ ಜಿಲ್ಲಾ ಮಟ್ಟದ ‘ಗುರುಕುಲ ಗುರು ರತ್ನ’ ಪ್ರಶಸ್ತಿಗೆ ಒಡೆಯರ್ ಮಲ್ಲಾಪುರದ ವಿಜ್ಞಾನ ಶಿಕ್ಷಕಿ ಶ್ರೀಮತಿ ಎಸ್.ಡಿ. ಕರೇಗೌಡ್ರು ಭಾಜನರಾಗಿದ್ದಾರೆ.

ಗದಗ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ನೌಕರರ ಸಂಘದ ವತಿಯಿಂದ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಪ್ರಶಸ್ತಿಯನ್ನು ವಿಧಾನ ಪರಿಷತ್ ಮಾಜಿ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅವರು ಪ್ರದಾನ ಮಾಡಿ ಶಿಕ್ಷಕಿ ಎಸ್.ಡಿ. ಕರೇಗೌಡ್ರು ಅವರಿಗೆ ಶುಭ ಹಾರೈಸಿದರು. ಕಾರ್ಯಕ್ರಮದಲ್ಲಿ ರಾಜ್ಯ ಹಾಗೂ ಜಿಲ್ಲಾ ಸಂಘದ ಪದಾಧಿಕಾರಿಗಳು, ಶಿಕ್ಷಕರು ಸೇ-ರಿದಂತೆ ಹಲವರು ಭಾಗವಹಿಸಿದ್ದರು.

ಶಿಕ್ಷಣ ಕ್ಷೇತ್ರದಲ್ಲಿ ಶಿಕ್ಷಕರ ಸೇವೆ ಹಾಗೂ ವಿದ್ಯಾರ್ಥಿಗಳ ಸಾಧನೆಗೆ ನೀಡಲಾಗುತ್ತಿರುವ ಗೌರವಗಳ ಕುರಿತು ಬಸವರಾಜ ಹೊರಟ್ಟಿ ಮತ್ತು ಎಸ್.ವಿ. ಸಂಕನೂರ ಅವರು ಗದಗದ ವಿವಿಧ ಶೈಕ್ಷಣಿಕ ಕಾರ್ಯಕ್ರಮಗಳಲ್ಲಿ ಮಾತನಾಡಿರುವುದು ವರದಿಯಾಗಿದೆ.

## ಕರಾಟೆ ಅಖಾಡದಲ್ಲಿ ಕೆಲೂರು ಶಾಲೆ ಮಕ್ಕಳ ಕಮಾಲ್

ವಿಜಯಸಾಕ್ಷಿ ಸುದ್ದಿ, ಡಂಬಳ

2026-27ನೇ ಸಾಲಿನ 14 ವರ್ಷದೊಳಗಿನವರ ಜಿಲ್ಲಾಮಟ್ಟದ ಕ್ರೀಡಾಕೂಟದಲ್ಲಿ ಡಂಬಳ ಹೋಬ ಳಿಯ ಕೆಲೂರು ಸರ್ಕಾರಿ ಹಿರಿಯ ಪ್ರಾಥ ಮಿಕ ಶಾಲೆಯ ವಿದ್ಯಾರ್ಥಿಗಳು ಕರಾಟೆ ಹಾಗೂ ಟೈಕ್ವಾಂಡೋ ಸ್ಪರ್ಧೆಯಲ್ಲಿ ಗಮನಾರ್ಹ ಸಾಧನೆ ಮಾಡಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿನಿ ನಯನ ತಿಮ್ಮಾಪುರ 22-24 ಕೆ.ಜಿ. ವಿಭಾಗದ ಟೈಕ್ವಾಂಡೋದಲ್ಲಿ ಪ್ರಥಮ ಹಾಗೂ ಕರಾಟೆ ಫೈಟ್‌ನಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ. ಭವಾನಿ ಪಾಟೀಲ 30 ಕೆ.ಜಿ. ವಿಭಾಗದ ಟೈಕ್ವಾಂಡೋದಲ್ಲಿ ಪ್ರಥಮ ಹಾಗೂ ಕರಾಟೆ ಫೈಟ್‌ನಲ್ಲಿ ತೃತೀಯ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

## ಅ.31ರಂದು ರಾಜ್ಯ ಮಟ್ಟದ ಮುಕ್ತ ಯೋಗಾಸನ ಸ್ಪರ್ಧೆ




ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ದ್ವಿತೀಯ ಬಾರಿಗೆ ಆಯೋಜಿಸಿರುವ ರಾಜ್ಯ ಮಟ್ಟದ ಮುಕ್ತ ಯೋಗಾಸನ ಸ್ಪರ್ಧೆ-2026ರ ದಿನಾಂಕವನ್ನು ಶಾಲಾ ಮಕ್ಕಳ ಅರ್ಧವಾರ್ಷಿಕ ಪರೀಕ್ಷೆ ಹಿನ್ನೆಲೆಯಲ್ಲಿ ಮುಂದೂಡಲಾಗಿದೆ.

ಶರಣರ ಜ್ಞಾನ ಯೋಗಾಶ್ರಮ ಟ್ರಸ್ಟ್ (ರಿ.), ಗದಗ, ಎಸ್.ಆರ್.ಕೆ. ಯೋಗ ಸಮಿತಿ, ಕೋರೆಕೊಪ್ಪ ಹಾಗೂ ಆರೋಗ್ಯ ಸಂಗಮ ಸೇವಾ ಸಮಿತಿ, ಬೈಲಹೊಂಗಲ ಇವರ ಸಹಯೋಗದಲ್ಲಿ ಈ ಸ್ಪರ್ಧೆಯನ್ನು ಅ.3ರಂದು ಆಯೋಜಿಸಲಾಗಿತ್ತು. ಇದೀಗ ಸ್ಪರ್ಧೆಯ ಹೊಸ ದಿನಾಂಕವನ್ನು ಅಕ್ಟೋಬರ್ 31, ಶನಿವಾರ ಎಂದು ನಿಗದಿಪಡಿಸಲಾಗಿದೆ.

ಅಂದು ಗದಗ ನಗರದ ಮುಳಗುಂದ ರಸ್ತೆಯಲ್ಲಿರುವ ಕನಕ ಭವನ ಕಲ್ಯಾಣ ಮಂಟಪದಲ್ಲಿ ರಾಜ್ಯ ಮಟ್ಟದ ಮುಕ್ತ ಯೋಗಾಸನ ಸ್ಪರ್ಧೆ ನಡೆಯಲಿದೆ.

ರಾಜ್ಯದ ವಿವಿಧ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳು, ಯೋಗ ಸಂಸ್ಥೆಗಳು, ಯೋಗ ಇನ್‌ಸ್ಟಿಟ್ಯೂಟ್‌ಗಳು ಹಾಗೂ ಯೋಗಾಸಕ್ತರು ಸ್ಪರ್ಧೆಯಲ್ಲಿ ಭಾಗವಹಿಸಬಹುದಾಗಿದೆ.

ಸ್ಪರ್ಧೆಯಲ್ಲಿ ಭಾಗವಹಿಸುವವರು ಅಕ್ಟೋಬರ್ 20ರೊಳಗೆ ತಮ್ಮ ಹೆಸರು ನೋಂದಾಯಿಸಿಕೊಳ್ಳುವಂತೆ ಆಯೋಜಕರು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಸುನೀಲ ಎಸ್. ಹಿರೇಮಠ: 8884672515 ಅವರನ್ನು ಸಂಪರ್ಕಿಸಬಹುದು.


**EK INFRASTRUCTURE**
ENGINEERING CONTRACTORS

**Public Safety Intimation – Charging of 33 kV Transmission Line**

This is to inform the general public, farmers, landowners, and residents of **Mulgund, Harti, Yalavathi, Sheethalahari, Chinchali, Soratur, Basapura, Shirahatti, Hanganakatte, Chabbi, Kurtikoti, Nelagund** falling along the route of the 33 kV Transmission Line under the **336 MW Wind Power Project** that the line is proposed to be charged (energized) on 19**.09.2026.**

After charging, the transmission line will be **energized** condition and shall always remain **LIVE.**

The General public is requested to observe the following safety precautions:

- Do not touch or approach the transmission line, poles, conductors, or associated electrical equipment
- Do not climb poles or attempt to remove any electrical materials.
- Do not carry out any unauthorized work near the energized transmission line
- Theft or damage to transmission line materials is a punishable offence and may result in fatal electric shock, serious injury, or loss of life.
- Immediately report any suspicious activity or damage to the nearest Police Station or the project authorities

This notice is issued in the interest of public safety and to create awareness among the public and we have followed all the safety guidelines as per the electricity rules of **KPTCL and CEA** like Danger board arrangements, Pole Earthing, Anti-climbing Devices & Etc., for public safety.

**Project: Annigere-KA, Phase-I 336 MW Wind Power Projects**
**Client: Serentica Renewables India Private Limited**
**EPC Contactor: EK Infrastructure**

**Yours Faithfully,**

**M/s EK INFRASTRUCTURE**

GSTIN : 33BBGPK9237D1ZS, PAN NO : BBGPK9237D
Mobile - +919994602525,8310725325 E-mail - ekinfrastructure2020@gmail.com
Address –D No 872/84, KTC Nagar, Tirunelveli- Dist. Tamilnadu-627011


## ಎಪಿಎಂಸಿಯಲ್ಲಿ ಭಕ್ತಿಭಾವದ ಗಣೇಶೋತ್ಸವ

ವಿಜಯಸಾಕ್ಷಿ ಸುದ್ದಿ, ಗದಗ



> ವರ್ಷವಿಡೀ ರೈತರು ಹಾಗೂ ವರ್ತಕರ ವ್ಯಾಪಾರ-ವಹಿವಾಟು ಸುಗಮವಾಗಿ ಸಾಗಲಿ. ನಾಡಿನಲ್ಲಿ ಉತ್ತಮ ಮಳೆಯಾಗಿ ಬೆಳೆ ಸಮೃದ್ಧಿಯಾಗಲಿ ಹಾಗೂ ಎಲ್ಲರಿಗೂ ಸುಖ-ಶಾಂತಿ ದೊರೆಯಲಿ ಎಂದು ಗಣೇಶನಲ್ಲಿ ಪ್ರಾರ್ಥಿಸಲಾಗಿದೆ.
> – ಶೇಖಣ್ಣ ಗದ್ದಿಕೇರಿ, ಅಧ್ಯಕ್ಷ, ಎಪಿಎಂಸಿ ಖರೀದಿ ವರ್ತಕರ ಸಂಘ

ನಗರದ ಗಾನಯೋಗಿ ಪಂ. ಪಂಚಾಕ್ಷರ ಗವಾಯಿಗಳ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ) ಆವರಣದಲ್ಲಿ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಪ್ರತಿಷ್ಠಾಪಿಸಲಾಗಿರುವ ಗಣೇಶ ಮೂರ್ತಿಗೆ ಮೂರನೇ ದಿನದ ವಿಶೇಷ ಪೂಜಾ ಕೈಂಕರ್ಯಗಳನ್ನು ಎಪಿಎಂಸಿ ಖರೀದಿ ವರ್ತಕರ ಸಂಘದ ವತಿಯಿಂದ ಶ್ರದ್ಧಾ-ಭಕ್ತಿಯಿಂದ ನೆರವೇರಿಸಲಾಯಿತು.

ಗಣೇಶ ಮೂರ್ತಿಯನ್ನು ವಿವಿಧ ಬಗೆಯ ನೈಸರ್ಗಿಕ ಫಲ-ಪುಷ್ಪಗಳು ಹಾಗೂ ಸುಗಂಧಿತ ಮಾಲೆಗಳಿಂದ ಅಲಂಕರಿಸಲಾಗಿತ್ತು.

ಬೆಳಗಿನ ಜಾವದಿಂದಲೇ ಸಾಂಪ್ರದಾಯಿಕ ಮಹಾಪೂಜೆ, ಅಷ್ಟೋತ್ತರ ಶತನಾಮಾವಳಿ ಹಾಗೂ ಮಹಾಮಂಗಳಾರತಿ ನೆರವೇರಿತು.

ಈ ಸಂದರ್ಭದಲ್ಲಿ ಖರೀದಿ ವರ್ತಕರ ಸಂಘದ ಅಧ್ಯಕ್ಷ ಶೇಖಣ್ಣ ಗದ್ದಿಕೇರಿ, ರಾಘವೇಂದ್ರ ಕಾಲವಾಡ, ಶಾಮದಾಸ್ ಪುಣೇಕರ, ಮಧುಸೂದನ್ ಪುಣೇಕರ, ಅಶೋಕ ಸಂಕಣ್ಣವರ, ಉಮೇಶ ಹುಬ್ಬಳ್ಳಿ, ವೀರಣ್ಣ ಕಾಡಪ್ಪನವರ, ರಾಜಣ್ಣ ಗುಡಿಮನಿ, ಜಿ.ವ್ಹಿ. ಘಟ್ಟದ, ಎಂ.ಎಂ. ಚವಡಿ, ಪರಪ್ಪ ಗುಡಿಸಾಗರ, ಅರವಿಂದ ವಾರಕರ್, ಮಂಜುನಾಥ ಕವಲೂರ, ಮಲ್ಲಿಕಾರ್ಜುನ ಚಳಗೇರಿ, ಮಲ್ಲಿಕಾರ್ಜುನ ನಾಗತಾಣ ಸೇರಿದಂತೆ ಹಲವರು ಉಪಸ್ಥಿತ-ರಿದ್ದರು.

ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿಯ ಅಧ್ಯಕ್ಷ ತಿಮ್ಮರೆಡ್ಡಿ ಕೋನರೆಡ್ಡಿ, ಗೌರವ ಅಧ್ಯಕ್ಷ ಪ್ರಮೋದ ಆರ್. ವಾರಕರ, ಕಾರ್ಯದರ್ಶಿ ರಾಜಶೇಖರ ಬಿ. ಮುಧೋಳ, ಉಪಾಧ್ಯಕ್ಷ ರಾಜು ಎನ್. ಮೂಲೀಮನಿ, ಸಹಕಾರ್ಯದರ್ಶಿ ಚಂದ್ರಕಾಂತ ಬಿ. ಸವದತ್ತಿ, ಖಜಾಂಚಿ ಮಹೇಶ ಜಿ. ಗಾಣಿಗೇರ, ವಿನಾಯಕ ಪಿ. ವಜ್ರೇಶ್ವರಿ, ವಿವೇಕಾನಂದ ಗುಡಿಮನಿ, ಕೊಟ್ರೇಶ ಈ. ಬಾಳಿಕಾಯಿ, ಗಿರೀಶ ವಿ. ಅಳವಂಡಿ, ದಯಾನಂದ ದುಂಡಪ್ಪನವರ, ಅಜೀತ್ ಪುಣೇಕರ, ವಿನೂತ್ ಕವಲೂರ ಹಾಗೂ ಸಾಗರ ವಜ್ರೇಶ್ವರಿ ಉಪಸ್ಥಿತರಿದ್ದರು.

ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಅನಿಲ ಚಿನ್ನಾಪೂರ, ಬಸವರಾಜ ಅಂಗಡಿ, ಗಂಗಾಧರ ಗೊಡಚಿ, ಜಿ.ವ್ಹಿ. ಘಟ್ಟದ, ಮಂಜುನಾಥ ಕವಲೂರ, ಭಾವೇಶ ಸಾಹುಕಾರ, ಸಿದ್ಧಣ್ಣ ಉಮಚಗಿ ಹಾಗೂ ಚಂದ್ರಶೇಖರ ಮಾಳಗೊಂಡ ಅವರನ್ನು ಸನ್ಮಾನಿಸಲಾಯಿತು.


**EK INFRASTRUCTURE**
ENGINEERING CONTRACTORS

**ಸಾರ್ವಜನಿಕ ಸುರಕ್ಷತಾ ಮಾಹಿತಿ - 33 ಕೆವಿ ಪ್ರಸರಣ ಮಾರ್ಗದ ಚಾರ್ಜಿಂಗ್**

**336 ಮೆಗಾವ್ಯಾಟ್ ಪವನ** ವಿದ್ಯುತ್ ಯೋಜನೆಯಡಿಯಲ್ಲಿ 33 ಕೆವಿ ಪ್ರಸರಣ ಮಾರ್ಗದಲ್ಲಿ ಬರುವ **ಮುಳುಗುಂದ, ಹರ್ತಿ, ಯಳವತ್ತಿ, ಶೀತಾಲಹರಿ, ಚಿಂಚಲಿ, ಸೊರಟೂರು, ಬಸಾಪುರ, ಶಿರಹಟ್ಟಿ, ಹಂಗನಕಟ್ಟೆ, ಛಬ್ಬಿ, ಕುರ್ತಕೋಟಿ, ನೀಲಗುಂದದ** ಸಾರ್ವಜನಿಕರು, ರೈತರು, ಭೂಮಾಲೀಕರು ಮತ್ತು ನಿವಾಸಿಗಳಿಗೆ ಈ ಮಾರ್ಗವನ್ನು 19**.09.2026** ರಂದು ಚಾರ್ಜ್ ಮಾಡಲು (ಶಕ್ತಿ ಚಾಲಿತಗೊಳಿಸಲು) ಪ್ರಸ್ತಾಪಿಸಲಾಗಿದೆ ಎಂದು ತಿಳಿಸಲು ಇದು ಉದ್ದೇಶಿಸಲಾಗಿದೆ.

**ಚಾರ್ಜ್ ಮಾಡಿದ ನಂತರ, ಪ್ರಸರಣ ಮಾರ್ಗವು ವಿದ್ಯುತ್‌ಯುತ ಸ್ಥಿತಿಯಲ್ಲಿರುತ್ತದೆ ಮತ್ತು ಯಾವಾಗಲೂ 'ಲೈವ್' (ವಿದ್ಯುತ್ ಪ್ರವಹಿಸುವ) ಸ್ಥಿತಿಯಲ್ಲಿಯೇ ಇರುತ್ತದೆ.**

ಸಾರ್ವಜನಿಕರು ಈ ಕೆಳಗಿನ ಸುರಕ್ಷತಾ ಮುನ್ನೆಚ್ಚರಿಕೆಗಳನ್ನು ಪಾಲಿಸಲು ಕೋರಲಾಗಿದೆ:

- ಪ್ರಸರಣ ಮಾರ್ಗ, ಕಂಬಗಳು, ವಾಹಕಗಳು ಅಥವಾ ಸಂಬಂಧಿತ ವಿದ್ಯುತ್ ಉಪಕರಣಗಳನ್ನು ಮುಟ್ಟಬೇಡಿ ಅಥವಾ ಸಮೀಪಿಸಬೇಡಿ.
- ಕಂಬಗಳನ್ನು ಹತ್ತಬೇಡಿ ಅಥವಾ ಯಾವುದೇ ವಿದ್ಯುತ್ ವಸ್ತುಗಳನ್ನು ತೆಗೆಯಲು ಪ್ರಯತ್ನಿಸಬೇಡಿ.
- ವಿದ್ಯುತ್ ಚಾಲಿತ ಪ್ರಸರಣ ಮಾರ್ಗದ ಬಳಿ ಯಾವುದೇ ಅನಧಿಕೃತ ಕೆಲಸವನ್ನು ಕೈಗೊಳ್ಳಬೇಡಿ.
- ಪ್ರಸರಣ ಮಾರ್ಗದ ವಸ್ತುಗಳಿಗೆ ಕಳ್ಳತನ ಅಥವಾ ಹಾನಿ ಶಿಕ್ಷಾರ್ಹ ಅಪರಾಧವಾಗಿದ್ದು, ಅದು ಮಾರಕ ವಿದ್ಯುತ್ ಆಘಾತ, ಗಂಭೀರ ಗಾಯ ಅಥವಾ ಜೀವಹಾನಿಗೆ ಕಾರಣವಾಗಬಹುದು.
- ಯಾವುದೇ ಅನುಮಾನಾಸ್ಪದ ಚಟುವಟಿಕೆ ಅಥವಾ ಹಾನಿಯನ್ನು ಹತ್ತಿರದ ಪೊಲೀಸ್ ಠಾಣೆ ಅಥವಾ ಯೋಜನಾ ಅಧಿಕಾರಿಗಳಿಗೆ ತಕ್ಷಣ ವರದಿ ಮಾಡಿ.

ಸಾರ್ವಜನಿಕ ಸುರಕ್ಷತೆಯ ಹಿತದೃಷ್ಟಿಯಿಂದ ಮತ್ತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಈ ಸೂಚನೆಯನ್ನು ನೀಡಲಾಗಿದೆ ಮತ್ತು ಸಾರ್ವಜನಿಕ ಸುರಕ್ಷತೆಗಾಗಿ ನಾವು **KPTCL** ಮತ್ತು **CEA** ವಿದ್ಯುತ್ ನಿಯಮಗಳ ಪ್ರಕಾರ ಡೇಂಜರ್ ಬೋರ್ಡ್ ವ್ಯವಸ್ಥೆಗಳು, ಪೋಲ್ ಅರ್ಥಿಂಗ್, ಆಂಟಿಕ್ಲೈಂಬಿಂಗ್ ಸಾಧನಗಳು ಇತ್ಯಾದಿಗಳಂತಹ ಎಲ್ಲಾ ಸುರಕ್ಷತಾ ಮಾರ್ಗಸೂಚಿಗಳನ್ನು ಅನುಸರಿಸಿದ್ದೇವೆ.

**ಯೋಜನೆ: ಅಣ್ಣಿಗೇರಿ-ಕರ್ನಾಟಕ, ಮೊದಲ ಹಂತದ 336 ಮೆಗಾವ್ಯಾಟ್ ಪವನ ವಿದ್ಯುತ್ ಯೋಜನೆಗಳು ಗ್ರಾಹಕರು: ಸೆರೆಂಟಿಕಾ ರಿನ್ಯೂವಬಲ್ಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಇಪಿಸಿ (EPC) ಗುತ್ತಿಗೆದಾರರು: ಇಕೆ (EK) ಇನ್ಫ್ರಾಸ್ಟ್ರಕ್ಚರ್**

**ಇಂತಿ ನಿಮ್ಮ ನಂಬಿಕಸ್ತ,**
**M/s ಇಕೆ (EK) ಇನ್ಫ್ರಾಸ್ಟ್ರಕ್ಚರ್**

GSTIN : 33BBGPK9237D1ZS, PAN NO : BBGPK9237D
Mobile - +919994602525,8310725325 E-mail - ekinfrastructure2020@gmail.com
Address –D No 872/84, KTC Nagar, Tirunelveli- Dist. Tamilnadu-627011


### ದೇವಾಲಯಗಳು ಜನಜಾಗೃತಿ ಕೇಂದ್ರಗಳಾಗಲಿ: ರಂಭಾಪುರಿ ಜಗದ್ಗುರು

# ಧರ್ಮದಿಂದ ಸಂಸ್ಕೃತಿ, ಸಂಸ್ಕೃತಿಯಿಂದ ಸಮಾಜಕ್ಕೆ ಬಲ

ವಿಜಯಸಾಕ್ಷಿ ಸುದ್ದಿ, ತರೀಕೆರೆ



> ವಿಜ್ಞಾನವನ್ನು ಸ್ವೀಕರಿಸೋಣ; ಆದರೆ ಸಂಸ್ಕಾರವನ್ನು ಕಳೆದುಕೊಳ್ಳಬಾರದು. ಆಧುನಿಕತೆಯನ್ನು ಅಪ್ಪಿಕೊಳ್ಳೋಣ, ಆದರೆ ನಮ್ಮ ಧಾರ್ಮಿಕ ಪರಂಪರೆಯನ್ನು ನಿರ್ಲಕ್ಷಿಸಬಾರದು.
> – ಶ್ರೀ ರಂಭಾಪುರಿ ಜಗದ್ಗುರು

ದೇವಾಲಯಗಳು ಕೇವಲ ಪೂಜಾ ಕೇಂದ್ರಗಳಾಗದೆ ಜನಜಾಗೃತಿ ಹಾಗೂ ಸಮಾಜ ಜಾಗೃತಿಯ ಕೇಂದ್ರಗಳಾಗಬೇಕು. ಧರ್ಮದಿಂದ ಸಂಸ್ಕೃತಿ ಉಳಿದರೆ, ಸಂಸ್ಕೃತಿಯಿಂದ ಸಮಾಜ-ಕ್ಕೆ ಹೆಚ್ಚಿನ ಬಲ ದೊರೆಯುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ತಾಲೂಕಿನ ಹಳಿಯೂರು ಗ್ರಾಮದ ಶ್ರೀ ಬಯಲು ಬಸವೇಶ್ವರಸ್ವಾಮಿ ಹಾಗೂ ಶ್ರೀ ಉಮಾಮಹೇಶ್ವರಸ್ವಾಮಿ ಉತ್ಸವ ಮೂರ್ತಿಗಳ ಪುನರ್‌ಪ್ರತಿಷ್ಠಾಪನೆ ಹಾಗೂ ಮಂಡಲ ಪೂಜಾ ಮಹೋತ್ಸವದ ಅಂಗವಾಗಿ ನಡೆದ ಜನಜಾಗೃತಿ ಧರ್ಮ ಸಮಾರಂಭದಲ್ಲಿ ಆಶೀರ್ವಚನ ನೀಡಿದರು.

ಆಧುನಿಕ ಶಿಕ್ಷಣ ಮತ್ತು ತಂತ್ರಜ್ಞಾನದಲ್ಲಿ ಯುವಜನತೆ ಮುನ್ನಡೆಯುತ್ತಿರುವ ಸಂದರ್ಭದಲ್ಲಿ ಧರ್ಮ, ಸಂಸ್ಕೃತಿ, ಪರಂಪರೆ ಹಾಗೂ ಆಧ್ಯಾತ್ಮಿಕ ಮೌಲ್ಯಗಳನ್ನು ಮರೆಯಬಾರದು. ವಿಜ್ಞಾನವನ್ನು ಸ್ವೀಕರಿಸೋಣ, ಆದರೆ ಸಂಸ್ಕಾರ ಕಳೆದುಕೊಳ್ಳಬಾರದು. ಆಧುನಿಕತೆಯನ್ನು ಅಪ್ಪಿಕೊಂಡರೂ ಧಾರ್ಮಿಕ ಪರಂಪರೆಯನ್ನು ನಿರ್ಲಕ್ಷಿಸಬಾರದು ಎಂದರು.

ದೇವರ ಮುಂದೆ ಎಲ್ಲರೂ ಸಮಾನರು. ಜಾತಿ, ವರ್ಗ ಹಾಗೂ ಆರ್ಥಿಕ ಸ್ಥಿತಿಯ ಭೇದಗಳನ್ನು ಮೀರಿ ಪ್ರೀತಿ, ಸಹೋದರತ್ವ ಮತ್ತು ಸೌಹಾರ್ದದಿಂದ ಬದುಕುವುದೇ ನಿಜವಾದ ಧರ್ಮಾಚರಣೆ. ಮಕ್ಕಳಿಗೆ ಸಂಸ್ಕಾರ, ಯುವಕರಲ್ಲಿ ಧರ್ಮಪ್ರಜ್ಞೆ ಹಾಗೂ ಸಮಾಜದಲ್ಲಿ ದಾಸೋಹದ ಮನೋಭಾವ ಬೆಳೆಸಬೇಕು ಎಂದು ಕರೆ ನೀಡಿದರು.

ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮೀಜಿ ಸಮಾರಂಭ ಉದ್ಘಾಟಿಸಿ ಮಾತನಾಡಿದರು. ತರೀಕೆರೆ ಜಗದೀಶ ಶಿವಾಚಾರ್ಯ ಸ್ವಾಮೀಜಿ ನೇತೃತ್ವ ವಹಿಸಿದ್ದರು.

ಶಾಸಕ ಜಿ.ಎಚ್. ಶ್ರೀನಿವಾಸ್ ಅವರು ‘ರಂಭಾಪುರಿ ಬೆಳಗು’ ಡಿಜಿಟಲ್ ಮಾಸಪತ್ರಿಕೆ ಬಿಡುಗಡೆ ಮಾಡಿದರು. ಮಾಜಿ ಶಾಸಕ ಡಿ. ಎಸ್. ಸುರೇಶ್ ಮಾತನಾಡಿದರು. ಕೆ.ಆರ್. ಧ್ರುವಕುಮಾರ್, ಹೆಚ್.ಎಂ. ಗೋಪಿಕೃಷ್ಣ ಸೇ-ರಿದಂತೆ ಗಣ್ಯರು ಉಪಸ್ಥಿತರಿದ್ದರು.

ಸಮಾರಂಭಕ್ಕೂ ಮುನ್ನ ಗ್ರಾಮದಲ್ಲಿ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವ ವೈಭವದಿಂದ ನಡೆಯಿತು. ಸಾಂಸ್ಕೃತಿಕ ಕಲಾತಂಡಗಳು ಹಾಗೂ ವೀರಗಾಸೆ ಕಲಾವಿದರು ಮೆರವಣಿಗೆಯಲ್ಲಿ ಪಾಲ್ಗೊಂಡರು. ಸುತ್ತಮುತ್ತಲ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಜಗದ್ಗುರುಗಳ ದರ್ಶನಾಶೀರ್ವಾದ ಪಡೆದರು. ಬಳಿಕ ಅನ್ನದಾಸೋಹ ನಡೆಯಿತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka